ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 147 RNI Number : KNKAN/25/A2770 05-06-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :147 ರಾಯಚೂರು 05-06-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ಡಿ.ಕೆ.ಶಿವಕುಮಾರ್ ಸರ್ಕಾರದಲ್ಲಿ ಖಾತೆ ಕಿರಿಕ್ ಶುರು..!

ಬೆಂಗಳೂರು, ಜೂ. 4- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಸಂಪುಟದಲ್ಲಿ ಮಾರನೇ ದಿನವೇ ಖಾತೆ ಹಂಚಿಕೆ ವಿಚಾರವಾಗಿ ಅಸಮಾಧಾನ ಕಾಣಿಸಿಕೊಂಡಿದ್ದು, ಹಿರಿಯರಾದ ರಾಮಲಿಂಗಾರೆಡ್ಡಿ ರಾಜೀನಾಮೆ ನೀಡಲು ಮುಂದಾಗಿದ್ದು, ಇರಿಸು- ಮುರಿಸಿನ ವಾತಾವರಣವನ್ನು ನಿರ್ಮಿಸಿದೆ.

ಆದೇ ರೀತಿ ಸಚಿವ ಕೃಷ್ಣಾ ಭೈರೇಗೌಡ ಅವರು ಕೂಡ ತಮಿಂದ ಕಂದಾಯ ಖಾತೆ ಕಸಿದುಕೊಳ್ಳುತ್ತಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.ಬೆಂಗಳೂರು ನಗರಾಭಿವೃದ್ಧಿ ಖಾತೆಗಾಗಿ ಪಟ್ಟುಹಿಡಿದಿರುವ ರಾಮಲಿಂಗಾರೆಡ್ಡಿ ಜಲ ಸಂಪನೂಲ ಖಾತೆ ನಿರ್ವಹಿಸಲು ನಿರಾಕರಿಸಿದ್ದಾರೆ. ಈ ಹಿಂದೆ ಸಿದ್ದರಾಮಯ್ಯಅವರ ಸಂಪುಟದಲ್ಲಿ ರಾಮಲಿಂಗಾರೆಡ್ಡಿಯವರಿಗೆ ನಗರಾಭಿವೃದ್ಧಿ ಖಾತೆ ನೀಡುವ ಚರ್ಚೆಯಾಗಿತ್ತು.

ಆ ವೇಳೆ ಡಿ.ಕೆ.ಶಿವಕುಮಾರ್ ಮತ್ತು ಡಿ.ಕೆ.ಸುರೇಶ್ ಅವರು ರಾಮಲಿಂಗಾರೆಡ್ಡಿ ಅವರ ಮನೆಗೆ ತೆರಳಿ, ಮನವೊಲಿಸಿದ್ದಲ್ಲದೇ ಆರಂಭದ ಎರಡೂವರೆ ವರ್ಷಗಳ ಕಾಲ ಬೆಂಗಳೂರು ನಗರಾಭಿವೃದ್ಧಿಯನ್ನು ಬಿಟ್ಟುಕೊಡುವಂತೆ ಮನವಿ ಮಾಡಿದ್ದರು. ಅದಕ್ಕೆ ಆಗ ರಾಮಲಿಂಗಾರೆಡ್ಡಿ ಒಪ್ಪಿದ್ದರು. ಈಗ ಸಂಪುಟ ರಚನೆಯಾದಾಗ ಬೆಂಗಳೂರಿನ ನಗರಾಭಿವೃದ್ಧಿ ಬದಲಾಗಿ ಜಲಸಂಪನೂಲ ಖಾತೆ ನೀಡಲು ನಿರ್ಧರಿಸಲಾಗಿದೆ.

ಜಲ ಸಂಪನೂಲ ಇಲಾಖೆಗೆ 37,800 ಕೋಟಿ ರೂ. ಹಂಚಿಕೆಯಾಗಿದ್ದು, ಅದರಲ್ಲಿ 37,300 ಕೋಟಿ ರೂ.ಗಳಷ್ಟು ವೆಚ್ಚದ ಕಾಮಗಾರಿಗಳಿಗೆ ಟೆಂಡರ್ ಕರೆದು, ಮುಂದಿನ ಎರಡು ವರ್ಷಗಳ ಕೆಲಸಗಳನ್ನು ಈಗಾಗಲೇ ಇತ್ಯರ್ಥಗೊಳಿಸಲಾಗಿದೆ. ಇನ್ನೂ ಜಲಸಂಪನೂಲ ಇಲಾಖೆಯಲ್ಲಿ ಬಾಕಿಯಿರುವುದು ಕೋರ್ಟ್ ತಗಾದೆ ಪ್ರಕರಣಗಳಷ್ಟೆ. ಅಲ್ಲಿ ಕೆಲಸ ಮಾಡಲು ಏನೂ ಉಳಿದಿಲ್ಲ ಎಂಬ ಅಸಮಾಧಾನ ರಾಮಲಿಂಗಾರೆಡ್ಡಿಯವರು ವ್ಯಕ್ತಪಡಿಸಿದ್ದಾರೆ ಎಂದು ಹೇಳಲಾಗಿದೆ.

ಇಂದು ಬೆಳಗ್ಗೆ ರಾಮಲಿಂಗಾರೆಡ್ಡಿಯವರು ರಾಜೀನಾಮೆ ಬರೆದ ಪತ್ರವನ್ನು ಮಡಚಿ ತಮ ಜೇಬಿನಲ್ಲಿಟ್ಟುಕೊಂಡು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿದರು. ವಿಧಾನಸೌಧದಲ್ಲಿ ರಾಜೀನಾಮೆ ಪತ್ರವನ್ನು ಮುಖ್ಯಮಂತ್ರಿ ಅವರಿಗೆ ನೀಡಲಾಗಿದೆ ಎಂದು ತಿಳಿದು ಬಂದಿದೆ.

ಆದರೆ ಇದನ್ನು ಒಪ್ಪದ ಡಿ.ಕೆ.ಶಿವಕುಮಾರ್ ಮನವೊಲಿಸಿ, ಹಿರಿಯ ಅಧಿಕಾರಿಗಳ ಸಭೆಯಲ್ಲಿ ಭಾಗವಹಿಸಲು ಬಲವಂತ ಪಡಿಸಿ ಕರೆದೊಯ್ದಿದ್ದಾರೆ. ನಿಮ ಆಸೆಯಂತೆ ನಗರಾಭಿವೃದ್ಧಿ ಇಲಾಖೆಯ ಜವಾಬ್ದಾರಿಯನ್ನೇ ವಹಿಸಲು ಹೈಕಮಾಂಡ್ ಬಳಿ ಚರ್ಚೆ ಮಾಡುತ್ತೇನೆ. ದುಡುಕಬೇಡಿ ಎಂದು ಭರವಸೆ ನೀಡಿದ್ದಾರೆ ಎನ್ನಲಾಗಿದೆ.

ಈ ಮೊದಲು 2019ರ ಜುಲೈನಲ್ಲಿ ಆಪರೇಷನ್ ಕಮಲ ನಡೆದು, ಜೆಡಿಎಸ್-ಕಾಂಗ್ರೆಸ್ ಸರ್ಕಾರ ಪತನಗೊಳ್ಳುವ ವೇಳೆಯಲ್ಲಿ ರಾಮಲಿಂಗಾರೆಡ್ಡಿಯವರು ಕಾಂಗ್ರೆಸ್‌ನ 14 ಜನರ ಜೊತೆ ತಾವು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾಗಿದ್ದರು. ಆಗ ಕನಕಪುರದಿಂದ ಸುಂಟರಗಾಳಿಯಂತೆ ಬಂದ ಡಿ.ಕೆ.ಶಿವಕುಮಾರ್ ವಿಧಾನಸಭಾಧ್ಯಕ್ಷರ ಕೊಠಡಿಗೆ ತೆರಳಿ ಅಲ್ಲಿ ರಾಮಲಿಂಗಾರೆಡ್ಡಿಯವರ ಕೈಲಿದ್ದ ರಾಜೀನಾಮೆ ಪತ್ರವನ್ನು ಕಸಿದು, ಹರಿದು ಬಿಸಾಕಿ ಕರೆದೊಯ್ದಿದ್ದರು. ಇಬ್ಬರ ನಡುವೆಯೂ ಉತ್ತಮ ಭಾಂದವ್ಯವಿತ್ತು. ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಡಿ.ಕೆ.ಶಿವಕುಮಾರ್ ಅವರ ತವರು ಜಿಲ್ಲೆ ರಾಮನಗರಕ್ಕೆ ರಾಮಲಿಂಗಾರೆಡ್ಡಿಯವರೇ ಉಸ್ತುವಾರಿ ಸಚಿವರಾಗಿದ್ದರು.

ಸಂಭವನೀಯ ಖಾತೆಗಳು :

ಡಿ ಕೆ ಶಿವಕುಮಾರ್(ಮುಖ್ಯಮಂತ್ರಿ) ಆಡಳಿತ ಮತ್ತು ಸಿಬ್ಬಂದಿ ಸುಧಾರಣಾ ಇಲಾಖೆ, ಗುಪ್ತಚರ

ಡಾ. ಜಿ ಪರಮೇಶ್ವರ (ಉಪಮುಖ್ಯಮಂತ್ರಿ) ಕಂದಾಯ

ರಾಮಲಿಂಗ ರೆಡ್ಡಿ- ಬೆಂಗಳೂರು ಉಸ್ತುವಾರಿ(ಮುಜರಾಯಿ)

ಸತೀಶ್ ಜಾರಕಿಹೊಳಿ- ಲೋಕೋಪಯೋಗಿ

ಕೆ ಜೆ ಜಾರ್ಜ್- ಇಂಧನ

ಕೆ ಹೆಚ್ ಮುನಿಯಪ್ಪ- ಆಹಾರ ಮತ್ತು ನಾಗರಿಕ ಪೂರೈಕೆ

ಈಶ್ವರ್ ಖಂಡ್ರೆ -ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಎಂ ಬಿ ಪಾಟೀಲ್- ಬೃಹತ್ ಕೈಗಾರಿಕೆ

ಡಾ. ಶರಣಪ್ರಕಾಶ್ ಪಾಟೀಲ್- ವೈದ್ಯಕೀಯ ಶಿಕ್ಷಣ

ಪ್ರಿಯಾಂಕ ಖರ್ಗೆ -ಗೃಹ ಮತ್ತು ಐಟಿ-ಬಿಟಿ

ಯು ಟಿ ಖಾದರ್- ಆರೋಗ್ಯ ಮತ್ತು ಕುಟುಂಬ ಕಲ್ಯಾಣ

ಬೈರತಿ ಸುರೇಶ್- ಸಾರಿಗೆ

ಕೃಷ್ಣ ಬೈರೇಗೌಡ ಬೃಹತ್ ನೀರಾವರಿ

ಡಾ. ಯತೀಂದ್ರ ಸಿದ್ದರಾಮಯ್ಯ- ನಗರಾಭಿವೃದ್ಧಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ

ಕರ್ನಾಟಕ ರಾಜಕಾರಣದಲ್ಲಿ ಸೋಲಿಲ್ಲದೇ ಸತತವಾಗಿ 8 ಬಾರಿ ಗೆದ್ದಿರುವ ಹಾಲಿ ಶಾಸಕರ ಪೈಕಿ ರಾಮಲಿಂಗಾರೆಡ್ಡಿ ಪ್ರಮುಖರಾಗಿದ್ದಾರೆ.

3ನೇಯ ಪುಟಕ್ಕೆ

ಕ. ಕರ್ನಾಟಕಕ್ಕೆ ಸಚಿವ ಸಂಪುಟದಲ್ಲಿ ಹೆಚ್ಚಿನ ಪ್ರಾತಿನಿಧ್ಯ ನೀಡಲು ಒತ್ತಾಯ



ರಾಯಚೂರು.ಜೂ. 04:

ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ರಾಜ್ಯ ಸರ್ಕಾರದಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಸಮರ್ಪಕ ಪ್ರಾತಿನಿಧ್ಯ ಸಿಗಬೇಕೆಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ರಾಘವೇಂದ್ರ ಕುಷ್ಟಗಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂನ್ 3ರಂದು ಅಧಿಕಾರಕ್ಕೆ ಬಂದ ಹೊಸ ಸಚಿವ ಸಂಪುಟದಲ್ಲಿ ಪ್ರಾದೇಶಿಕ ಅಸಮತೋಲನ ಕಂಡುಬರುತ್ತಿದೆ ಎಂದು ಅಭಿಪ್ರಾಯಪಟ್ಟಿದೆ. ಪ್ರಸ್ತುತ ಪ್ರಮಾಣ ವಚನ ಸ್ವೀಕರಿಸಿರುವ 14 ಸಚಿವರಲ್ಲಿ ಕೇವಲ ಐವರು ಮಾತ್ರ ಉತ್ತರ ಕರ್ನಾಟಕ ಭಾಗದವರಾಗಿದ್ದು, ಉಳಿದ ಒಂಬತ್ತು ಮಂದಿ ಬೆಂಗಳೂರು-ಮೈಸೂರು ಭಾಗಕ್ಕೆ ಸೇರಿದವರಾಗಿದ್ದಾರೆ ಎಂದರು. ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವ ಸಂಪುಟ ರಚನೆಯ ಸಂದರ್ಭದಲ್ಲಿ ಡಾ. ಡಿ.ಎಂ. ನಂಜುಂಡಪ್ಪ ವರದಿ ಶಿಫಾರಸುಗಳ ಅನ್ವಯ ಕಲ್ಯಾಣ ಕರ್ನಾಟಕ ಭಾಗಕ್ಕೆ ನ್ಯಾಯಯುತ ಪ್ರಾತಿನಿಧ್ಯ ನೀಡಿದ್ದರು. ಅದೇ ಮಾದರಿಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡ ಅನುಸರಿಸಬೇಕು ಎಂದು ಸಮಿತಿ ಮನವಿ ಮಾಡಿದರು.

ಮುಂದಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಕನಿಷ್ಠ ಆರು ಶಾಸಕರಿಗೆ ಸಚಿವ ಸ್ಥಾನ ನೀಡಬೇಕು. ಅಲ್ಲದೆ, ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಿಗೆ ಆ ಜಿಲ್ಲೆಯ ಸಚಿವರನ್ನೇ ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ನೇಮಿಸಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ, ನಿಗ'ಮ'ಂ-ಮ'ಂಡ'ಳಿಗ'ಳ'ಂ, ಅಕಾಡೆಮಿಗಳು ಹಾಗೂ ಪರಿಷತ್ತುಗಳಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಶೇ.25ರಷ್ಟು ಪಾಲು ನೀಡಬೇಕು. ರಾಜ್ಯ ಬಜೆಟ್ ನಲ್ಲಿಯೂ ಪ್ರಾದೇಶಿಕ ಅಸಮತೋಲನ ನಿವಾರಣೆಗೆ ಅಗತ್ಯವಾದ ಹಣಕಾಸು ಹಂಚಿಕೆ ಮಾಡಬೇಕು ಎಂದು ಆಗ್ರಹಿಸಿದರು.

3ನೇಯ ಪುಟಕ್ಕೆ

ದಿ.6:ಕ.ಕ.ಬೀದಿಬದಿ ವ್ಯಾಪಾರಿಗಳ ಮಹಾ ಸಮಾವೇಶ

ರಾಯಚೂರು,ಜೂ.04-

ಬೀದಿಬದಿ ವ್ಯಾಪಾರಿಗಳ ಹಕ್ಕುಗಳ ರಕ್ಷಣೆ ಹಾಗೂ ಮೂಲಭೂತ ಸೌಲಭ್ಯಗಳ ಒದಗಿಕೆಗೆ ಒತ್ತಾಯಿಸಿ ಕಲ್ಯಾಣ ಕರ್ನಾಟಕ ಬೀದಿಬದಿ ವ್ಯಾಪಾರಿಗಳ ಮಹಾ ಸಮಾವೇಶವನ್ನು ಜೂನ್ 6ರಂದು ಬೆಳಿಗ್ಗೆ 10.30ಕ್ಕೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಕೆಪಿಸಿಸಿ ಕಲ್ಯಾಣ ಕರ್ನಾಟಕ ಬೀದಿಬದಿ ವ್ಯಾಪಾರಿಗಳ ಸಮಿತಿಯ ಜಿಲ್ಲಾಧ್ಯಕ್ಷ ಯೇಸು ಮಿತ್ರ ತಿಳಿಸಿದ್ದಾರೆ.



ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾವೇಶವನ್ನು ಸಚಿವ ಡಾ. ಶರಣಪ್ರಕಾಶ ಪಾಟೀಲ್ ಉದ್ಘಾಟಿಸಲಿದ್ದು, ವಿವಿಧ ಸಚಿವರು, ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಿಂದ ಸುಮಾರು 3,000ಕ್ಕೂ ಅಧಿಕ ಬೀದಿಬದಿ ವ್ಯಾಪಾರಿಗಳು ಸಮಾವೇಶದಲ್ಲಿ ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದರು.

ಸಮಾವೇಶಕ್ಕೂ ಮುನ್ನ ನಗರದ ಶೆಟ್ಟಿಭಾವಿ ವೃತ್ತದಿಂದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದವರೆಗೆ ಬೃಹತ್ ಬೈಕ್ ರ್ಯಾಲಿ ಆಯೋಜಿಸಲಾಗಿದ್ದು, ರಾಜ್ಯಾಧ್ಯಕ್ಷ ಈ.ಸಿ. ರಂಗಸ್ವಾಮಿ ಹಾಗೂ ಜೂನಿಯರ್ ರಾಜಕುಮಾರ್ ಪ್ರಮುಖ ಆಕರ್ಷಣೆಯಾಗಲಿದ್ದಾರೆ ಎಂದು ತಿಳಿಸಿದರು.

ಬೀದಿಬದಿ ವ್ಯಾಪಾರಿಗಳ ಜೀವನಮಟ್ಟ ಸುಧಾರಣೆ ಹಾಗೂ ಸಾಮಾಜಿಕ ಭದ್ರತೆಯನ್ನು ಖಾತ್ರಿಪಡಿಸುವ ಉದ್ದೇಶದಿಂದ ಸರ್ಕಾರದ ಮುಂದೆ 10 ಪ್ರಮುಖ ಬೇಡಿಕೆಗಳನ್ನು ಮಂಡಿಸಲಾಗುವುದು. ವೈಜ್ಞಾನಿಕ ವೆಂಡಿಂಗ್ ಝೋನ್‌ಗಳ ನಿರ್ಮಾಣ, ವೆಂಡಿಂಗ್ ಝೋನ್‌ಗಳಲ್ಲಿ ಬೀದಿಬದಿ ವ್ಯಾಪಾರಿಗಳಿಗೆ ಶೇ.100 ಮೀಸಲಾತಿ, 55 ವರ್ಷ ಮೇಲ್ಪಟ್ಟ ವ್ಯಾಪಾರಿಗಳಿಗೆ ಮಾಸಿಕ 3,000 ಪಿಂಚಣಿ, ಮಕ್ಕಳಿಗೆ ಉಚಿತ ಶಿಕ್ಷಣ, ಟೌನ್ ವೆಂಡಿಂಗ್ ಕಮಿಟಿಗಳ ರಚನೆ ಹಾಗೂ ಬೀದಿಬದಿ ವ್ಯಾಪಾರಿಗಳ ಕಾಯ್ದೆ-2014ರ ಸಮರ್ಪಕ ಜಾರಿ ಸೇರಿದಂತೆ ಹಲವು ಪ್ರಮುಖ ವಿಷಯಗಳಿಗೆ ಸಮಾವೇಶದಲ್ಲಿ ಒತ್ತು ನೀಡಲಾಗುವುದು ಎಂದು ಯೇಸು ಮಿತ್ರ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಅತೀಕ್ ಪಟೇಲ್, ಶಂಶುದ್ದಿನ್ ಹಾಗೂ ಶ್ರೀನಿವಾಸ್ ಉಪಸ್ಥಿತರಿದ್ದರು.

ತ್ಯಾಜ್ಯ ವಿಂಗಡಣೆ ಕಡ್ಡಾಯ, ಉಲ್ಲಂಘಿಸಿದರೆ ಕ್ರಮ

ಬೃಹತ್ ತ್ಯಾಜ್ಯ ಉತ್ಪಾದಕರಿಗೆ ಪಾಲಿಕೆ ಆಯುಕ್ತ ಜುಬಿನ್ ಮೋಹಪಾತ್ರ ಎಚ್ಚರಿಕೆ



ರಾಯಚೂರು,ಜೂ.04-

ನಗರದ ಸ್ವಚ್ಛತೆ ಹಾಗೂ ಪರಿಸರ ಸಂರಕ್ಷಣೆಯಲ್ಲಿ ಬೃಹತ್ ತ್ಯಾಜ್ಯ ಉತ್ಪಾದಕರ ಪಾತ್ರ ಮಹತ್ವದ್ದಾಗಿದ್ದು, ತ್ಯಾಜ್ಯದ ಮೂಲ ವಿಂಗಡಣೆಯನ್ನು ಕಡ್ಡಾಯವಾಗಿ ಪಾಲಿಸಬೇಕು. ನಿಯಮಗಳನ್ನು ಉಲ್ಲಂಘಿಸಿದಲ್ಲಿ ಕಾನೂನು ಕ್ರಮ ಕೈಗೊಳ್ಳುವುದು ಅನಿವಾರ್ಯವಾಗಲಿದೆ ಎಂದು ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೋಹಪಾತ್ರ ಎಚ್ಚರಿಕೆ ನೀಡಿದರು.

ನಗರದ ಪಂ. ಜಂಬಲದಿನ್ನಿ ರಂಗಮಂದಿರದಲ್ಲಿ ಮಹಾನಗರ ಪಾಲಿಕೆ ವತಿಯಿಂದ ಆಯೋಜಿಸಿದ್ದ ಘನತ್ಯಾಜ್ಯ ನಿರ್ವಹಣಾ ನಿಯಮಗಳು-2026 ಹಾಗೂ ಬೃಹತ್ ತ್ಯಾಜ್ಯ ಉತ್ಪಾದಕರ ಜಾಗೃತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಘನತ್ಯಾಜ್ಯ ನಿರ್ವಹಣೆಯ ಯಶಸ್ಸು ತ್ಯಾಜ್ಯದ ಮೂಲ ವಿಂಗಡಣೆಯ ಮೇಲೆ ಅವಲಂಬಿತವಾಗಿದೆ. ಮನೆ, ವಾಣಿಜ್ಯ ಸಂಸ್ಥೆಗಳು ಹಾಗೂ ಕೈಗಾರಿಕೆಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಹಸಿ, ಒಣ ಹಾಗೂ ಅಪಾಯಕಾರಿ ತ್ಯಾಜ್ಯ ಎಂದು ಪ್ರತ್ಯೇಕವಾಗಿ ವಿಂಗಡಿಸಿ ನೀಡಬೇಕು. ವಿಶೇಷವಾಗಿ ಬೃಹತ್ ತ್ಯಾಜ್ಯ ಉತ್ಪಾದಕರು ತಮ್ಮ ಸ್ಥಳಗಳಲ್ಲಿಯೇ ಹಸಿ ತ್ಯಾಜ್ಯವನ್ನು ಸಂಸ್ಕರಿಸಿ ಸಂಪನ್ಮೂಲವನ್ನಾಗಿ ಪರಿವರ್ತಿಸಲು ಆದ್ಯತೆ ನೀಡಬೇಕು ಎಂದು ಅವರು ತಿಳಿಸಿದರು.

ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಯೋಗನಾಥಸಿಂಗ್ ಅವರು ಘನ ತ್ಯಾಜ್ಯ ನಿರ್ವಹಣಾ ನಿಯಮಗಳು -2026ರ ಪ್ರಮುಖ ಅಂಶಗಳು, ಬೃಹತ್ ತ್ಯಾಜ್ಯ ಉತ್ಪಾದಕರ ಕಾನೂನುಬದ್ಧ ಜವಾಬ್ದಾರಿಗಳು ಹಾಗೂ ನಿಯಮ ಉಲ್ಲಂಘನೆಯಿಂದ ಎದುರಾಗುವ ಪರಿಣಾಮಗಳ ಕುರಿತು ವಿವರಿಸಿದರು. ತ್ಯಾಜ್ಯ ನಿರ್ವಹಣೆ ಕೇವಲ ಪಾಲಿಕೆಯ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕ ಹಾಗೂ ಸಂಸ್ಥೆಯ ಜವಾಬ್ದಾರಿಯೂ ಆಗಿದೆ ಎಂದು ಹೇಳಿದರು.

ಮತ್ತೋರ್ವ ಸಂಪನ್ಮೂಲ ವ್ಯಕ್ತಿ ಸಂಪತ್ ಸಿ.ಎಂ. ಅವರು ತ್ಯಾಜ್ಯವನ್ನು ಸಂಪನ್ಮೂಲವನ್ನಾಗಿ ಪರಿವರ್ತಿಸುವ ವಿವಿಧ ವಿಧಾನಗಳು, ಹಸಿ ತ್ಯಾಜ್ಯದಿಂದ ಸಾವಯವ ಗೊಬ್ಬರ ತಯಾರಿಕೆ, ಮರುಬಳಕೆ ಹಾಗೂ ಮರುಸಂಸ್ಕರಣೆಯ ಮಹತ್ವದ ಕುರಿತು ಮಾಹಿತಿ

3ನೇಯ ಪುಟಕ್ಕೆ

ಜಿಲ್ಲೆಗೆ ಎರಡನೇ ಹಂತದಲ್ಲಿ ದೊರೆಯುವುದೇ ಸಚಿವ ಸ್ಥಾನ?

ರಾಯಚೂರು,ಜೂ.04-

ರಾಜ್ಯ ಸಚಿವ ಸಂಪುಟ ವಿಸ್ತರಣೆ ಪಟ್ಟಿಯಲ್ಲಿ ರಾಯಚೂರು ಜಿಲ್ಲೆಯ ಯಾವುದೇ ಶಾಸಕರು ಅಥವಾ ನಾಯಕರಿಗೆ ಸಚಿವ ಸ್ಥಾನ ದೊರೆಯದ ಹಿನ್ನೆಲೆಯಲ್ಲಿ ಜಿಲ್ಲಾ ಕಾಂಗ್ರೆಸ್‌ನಲ್ಲಿ ಅಸಮಾಧಾನದ ವಾತಾವರಣ ನಿರ್ಮಾಣವಾಗಿದೆ ಹಾಗೂ ಮೊದಲನೇ ಪಟ್ಟಿಯಲ್ಲಿ ಹಿನ್ನಡೆಯಾಗಿದೆ ಎಂಬ ಮಾತು ಸಾರ್ವಜನಿಕ ವಲಯಗಳಲ್ಲಿ ಜೋರಾಗಿದೆ.

ಸಚಿವ ಸ್ಥಾನದ ಆಕಾಂಕ್ಷಿಗಳ ಪಟ್ಟಿಯಲ್ಲಿ ಹಂಪನಗೌಡ ಬಾದರ್ಲಿ, ಹಂಪಯ್ಯ ನಾಯಕ, ಎ. ವಸಂತ್ ಕುಮಾರ್ ಹಾಗೂ ಎನ್ ಎಸ್ ಬೋಸರಾಜು ಅವರ ಹೆಸರುಗಳು ಪ್ರಮುಖವಾಗಿ ಕೇಳಿಬಂದಿದ್ದವು. ಇದರ ಜತೆಗೆ ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್, ಮಸ್ಕಿ ಶಾಸಕ ಬಸನಗೌಡ ತುರುವಿಹಾಳ ಹಾಗೂ ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಕೂಡ ಸಚಿವ ಸ್ಥಾನದ ರೇಸ್‌ನಲ್ಲಿದ್ದರು ಎಂದು ಪಕ್ಷದ ಆಪ್ತ ಮೂಲಗಳಿಂದ ಕೇಳಿಬಂದಿತ್ತು.

ಆದರೆ ಅಂತಿಮವಾಗಿ ಪ್ರಕಟವಾದ ಸಚಿವ ಸಂಪುಟ ಪಟ್ಟಿಯಲ್ಲಿ ಜಿಲ್ಲೆಯ ಯಾವುದೇ ನಾಯಕರಿಗೆ ಅವಕಾಶ ಸಿಗದಿರುವುದು ಕಾರ್ಯಕರ್ತರಲ್ಲಿ ನಿರಾಸೆ ಮೂಡಿಸಿದೆ. ಜಿಲ್ಲೆಗೆ ಸಚಿವ ಸ್ಥಾನ ಸಿಗುವ ನಿರೀಕ್ಷೆಯಲ್ಲಿದ್ದ ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಈ ಬೆಳವಣಿಗೆಯಿಂದ ಬೇಸರ ವ್ಯಕ್ತಪಡಿಸಿದ್ದಾರೆ.

ಜಾತಿ ನಿರ್ಮೂಲನೆ ಚಳವಳಿಯ ಲಿಂಗಾಯತ ಧರ್ಮದಲ್ಲಿ ಜಾತಿಯಾಧಾರದಲ್ಲಿ ಮಠಗಳ ವಟುಗಳಿಗೆ ತರಬೇತಿ ನೀಡುವ ಶಾಲೆ ಆರಂಭಗೊಂಡಿತು. ಬ್ರಾಹ್ಮಣರೊಂದಿಗೆ ಜಿದ್ದಿಗೆ ಬಿದ್ದು ಅಡ್ಡಪಲ್ಲಕ್ಕಿ ಹಾಗು ವ್ಯಾಸನತೋಳು ಮೆರವಣಿಗೆಯ ಅಸಂಗತ ಪದ್ದತಿಗಳನ್ನು ಲಿಂಗಾಯತ ಧರ್ಮದೊಳಗೆ ತೂರಿಸಲಾಯಿತು....

ಮೊದಲನೇ ಪಟ್ಟಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಿಯಾಂಕ ಖರ್ಗೆ, ಈಶ್ವರ ಖಂಡ್ರೆ ಹಾಗೂ

3ನೇಯ ಪುಟಕ್ಕೆ

ಡಾ. ಜಿ. ಪರಮೇಶ್ವರ ಉಪಮುಖ್ಯಮಂತ್ರಿಯಾಗಿ ಪ್ರಮಾಣವಚನ: ಛಲವಾದಿ ಮಹಾಸಭಾದಿಂದ ಸಂಭ್ರಮಾಚರಣೆ



ರಾಯಚೂರು,ಜೂ.04-ಪರಮೇಶ್ವರ ಅವರು ಇಂದು ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಛಲವಾದಿ ಮಹಾಸಭಾ ರಾಯಚೂರು ಜಿಲ್ಲಾ ಘಟಕದ ವತಿಯಿಂದ ನಗರದಲ್ಲಿ ಸಂಭ್ರ ಮಾಚರಣೆ ನಡೆಸಲಾಯಿತು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಬಿ.ಆರ್. ಅಂಬೇಡ್ಕರ್‌ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಸಿಹಿ ಹಂಚಿ, ಪಟಾಕಿ ಸಿಡಿಸುವ ಮೂಲಕ ಕಾರ್ಯಕರ್ತರು ಸಂತಸ ವ್ಯಕ್ತಪಡಿಸಿದರು. ಈ ವೇಳೆ ಕಾಂಗ್ರೆಸ್ ಹೈಕಮಾಂಡ್ ಹಾಗೂ ಪಕ್ಷದ ಹಿರಿಯ ನಾಯಕರಿಗೆ ಅಭಿನಂದನೆ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಛಲವಾದಿ ಮಹಾಸಭಾ ರಾಜ್ಯ ನಿರ್ದೇಶಕ ಎಂ. ವಸಂತ ಕುಮಾರ್, ಜಿಲ್ಲಾಧ್ಯಕ್ಷ ವಿಶ್ವನಾಥ್ ಪಟ್ಟಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ತಮ್ಮಣ್ಣ ವಕೀಲರು, ನಿವೃತ್ತ ಡಿವೈಎಸ್ಪಿ ಯಂಕಪ್ಪ ನಂದಿಹಾಳ, ಗೌರವಾಧ್ಯಕ್ಷ ಬಿ.ಎ. ದೊಡ್ಡಮನಿ, ಉಪಾಧ್ಯಕ್ಷರಾದ ಬಾಬು, ಪುಷ್ಪರಾಜ್ ಹಾಗೂ ಪಾರ್ಥಸಾರಥಿ, ಜಂಟಿ ಕಾರ್ಯದರ್ಶಿಗಳಾದ ವಿಜಯ್ ಪ್ರಸಾದ್ ಮತ್ತು ಬಿ. ಯಲ್ಲಪ್ಪ, ಕಾರ್ಯದರ್ಶಿ ಎಸ್. ಪ್ರಕಾಶ್, ಸಂಘಟನಾ ಕಾರ್ಯದರ್ಶಿ ಶಿವಕುಮಾರ್ ಹನುಮಾಪುರ, ಜಿಲ್ಲಾ ಖಜಾಂಚಿ ಚಿನ್ನರಾಯುಡು ಸೇರಿದಂತೆ ವೆಂಕಟೇಶ್ ದಿನ್ನಿ, ಮಾರುತಿ ಚಿಕ್ಕಸೂಗೂರು, ಉಪೇಂದ್ರ ರಾಂಪೂರ್, ಭೀಮೇಶ್ ಕುಡ್ಲಿ, ದೇವೇಂದ್ರ ಕುಡ್ಲಿ, ಗಂಗಾಧರ ಹಾಗೂ ಅನೇಕ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

ಛಲವಾದಿ ಸಮುದಾಯದ ಪರವಾಗಿ ಡಾ. ಜಿ. ಪರಮೇಶ್ವರ ಅವರಿಗೆ ಶುಭಾಶಯಗಳನ್ನು ಸಲ್ಲಿಸಿ,

3ನೇಯ ಪುಟಕ್ಕೆ



ನಾರದಗಡ್ಡೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ

ರಾಯಚೂರು ಜೂನ್ 04

ರಾಯಚೂರು ಜಿಲ್ಲಾ ಕೇಂದ್ರದಿದ ಸುಮಾರು 35 ಕಿ.ಮೀ. ದೂರದಲ್ಲಿರುವ ಐತಿಹಾಸಿಕ, ಪೌರಾಣಿಕ ಮತ್ತು ಪ್ರಾಕೃತಿಕ ಮಹತ್ವ ಹೊಂದಿರುವ ನಾರದಗಡ್ಡೆಗೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಜೂನ್ 03ರ ಬುಧವಾರ ದಂದು ಭೇಟಿ ನೀಡಿದರು.

ಈ ವೇಳೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮಾತನಾಡಿ, ನಾರದಗಡ್ಡೆಯು ಪ್ರಾಕೃತಿಕ ಮಹತ್ವ ಹೊಂದಿರುವ ವಿಶಿಷ್ಟ ತಾಣವಾಗಿದೆ. ಇಲ್ಲಿ ಇರುವ ಶ್ರೀ ಚನ್ನಬಸವೇಶ್ವರ ದೇವಸ್ಥಾನ, ನಾರದ ಮುನಿಗಳು ತಪಸ್ಸು ಮಾಡಿದ ನೆಲವೆಂಬ ನಂಬಿಕೆಗೆ ಸಾಕ್ಷಿಯಂತೆ ಉಳಿದಿದೆ. ಈ ಸ್ಥಳಕ್ಕೆ ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ, ತೆಲಂಗಾಣ ಮತ್ತು ಗೋವಾದ ಪ್ರವಾಸಿಗರು ನಾರದಗಡ್ಡೆಗೆ ಭೇಟಿ ನೀಡುತ್ತಾರೆ. ನಾರದಗಡ್ಡೆಯಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅಗತ್ಯ ಕ್ರಮವಹಿಸುವಂತೆ ಸಂಬಧಿಸಿದ ಇಲಾಖೆಯ

3ನೇಯ ಪುಟಕ್ಕೆ

ಶಾಸಕ ಪುಟ್ಟರಂಗಶೆಟ್ಟರಿಗೆ ಸಚಿವ ಸ್ಥಾನ ನೀಡಲು ಒತ್ತಾಯ






ರಾಯಚೂರು, ಮೇ.31

ಚಾಮರಾಜನಗರ ವಿಧಾನಸಭಾ ಕ್ಷೇತ್ರದ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಶ್ರೀ ಮಹರ್ಷಿ ಭಗೀರಥ ಟ್ರಸ್ಟ್‌ನ ಜಿಲ್ಲಾಧ್ಯಕ್ಷ ಅಮರೇಶ ಆದೋನಿ ಹಾಗೂ ಹಿರಿಯ ಸಲಹೆಗಾರರಾದ ಎಂ.ಸುಭಾಷ ಚಂದ್ರ ಅವರು ಪತ್ರಿಕಾ ಪ್ರಕಟಣೆಯಲ್ಲಿ ಒತ್ತಾಯಿಸಿದ್ದಾರೆ.

ರಾಜ್ಯದಲ್ಲಿ ಉಪ್ಪಾರ ಸಮಾಜವು ಸುಮಾರು 25 ರಿಂದ 30 ಲಕ್ಷ ಮತದಾರರನ್ನು ಹೊಂದಿದ್ದು, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ವ್ಯಾಪಕ ಬೆಂಬಲ ನೀಡುವ ಮೂಲಕ ಸರ್ಕಾರ ರಚನೆಯಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ತಿಳಿಸಿದರು.

3ನೇಯ ಪುಟಕ್ಕೆ

ಆಗಸ್ಟ್ ಅಂತ್ಯಕ್ಕೆ ರೈಲ್ವೆ ಮೇಲ್ಸೇತುವೆ ಕಾಮಗಾರಿ ಪೂರ್ಣಗೊಳಿಸಿ ಡಿಸಿ ಗಡುವು



ವಿಜಯನಗರ,ಜೂ.04-

ನಗರದ ಹಂಪಿ ರಸ್ತೆಯಲ್ಲಿರುವ ಅನಂತಶಯನಗುಡಿ ರೈಲ್ವೆ ಕ್ರಾಸಿಂಗ್ ಬಳಿ ನಿರ್ಮಾಣವಾಗುತ್ತಿರುವ ಬಹುನಿರೀಕ್ಷಿತ ರೈಲ್ವೆ ಮೇಲ್ಸೇತುವೆ ಕಾಮಗಾರಿಯ ಎಲ್ಲಾ ಲೋಪದೋಷಗಳನ್ನು ತಕ್ಷಣವೇ ಸರಿಪಡಿಸಿಕೊಂಡು, ಮುಂಬರುವ ಆಗಸ್ಟ್ ಅಂತ್ಯದ ವೇಳೆಗೆ ಕಾಮಗಾರಿಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಗಡುವು ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಹಂಪಿ ರಸ್ತೆ ಮೇಲ್ಸೇತುವೆ ಕಾಮಗಾರಿ ಪ್ರಗತಿ ಪರಿಶೀಲನೆಯ ತುರ್ತು ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ ಮಾತನಾಡಿದರು.

ಮೇಲ್ಸೇತುವೆ ಕಾಮಗಾರಿ ಆರಂಭಕ್ಕೆ ಇದ್ದ ಭೂಸ್ವಾಧೀನ ಪ್ರಕ್ರಿಯೆ, ಅನುದಾನ ಬಿಡುಗಡೆ ಹಾಗೂ ತಾಂತ್ರಿಕ ಅಡಚಣೆಗಳು ಸೇರಿದಂತೆ ಎಲ್ಲಾ ರೀತಿಯ ತೊಡಕುಗಳನ್ನು ಜಿಲ್ಲಾಡಳಿತ ಈಗಾಗಲೇ ಸಂಪೂರ್ಣವಾಗಿ ನಿವಾರಿಸಿ, ಸುಗವು ಕಾಮಗಾರಿ ಕೆಲಸಕ್ಕೆ ದಾರಿ ಮಾಡಿಕೊಟ್ಟಿದೆ. ಹೀಗಿದ್ದರೂ ಸಹ ಕಾಮಗಾರಿ ಮಾತ್ರ ಆಮೆಗತಿಯಲ್ಲಿ ಸಾಗುತ್ತಿರುವುದಕ್ಕೆ ಜಿಲ್ಲಾಧಿಕಾರಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಅಧಿಕಾರಿಗಳು ಮತ್ತು ಗುತ್ತಿಗೆದಾರರ ಇಂತಹ ನಿಧಾನಗತಿಯ ಧೋರಣೆ ಸಾರ್ವಜನಿಕರ ಮತ್ತು ಸ್ಥಳೀಯ ಜನಪ್ರತಿನಿಧಿಗಳ ತೀವ್ರ ಕೆಂಗಣ್ಣಿಗೆ ಗುರಿಯಾಗಿದೆ ಎಂದು ಸಂಬಂಧಪಟ್ಟ ಅಧಿಕಾರಿಗಳ ತರಾಟೆಗೆ ತೆಗೆದುಕೊಂಡರು.

ಹಂಪಿ ರಸ್ತೆಯು ಹೊಸಪೇಟೆಯ ಪ್ರಮುಖ ಸಂಪರ್ಕ ರಸ್ತೆಯಾಗಿದ್ದು, ಇಲ್ಲಿನ ರೈಲ್ವೆ ಗೇಟ್ ಬಳಿ ಮೇಲ್ಸೇತುವೆ ಕೆಲಸ ಅರ್ಧಕ್ಕೆ ನಿಂತಿರುವುದರಿಂದ ನಿತ್ಯ ಸಾವಿರಾರು ವಾಹನ ಸವಾರರು ಹಾಗೂ ಸಾರ್ವಜನಿಕರು ಸಂಚಾರ ದಟ್ಟಣೆಯಲ್ಲಿ ಸಿಲುಕಿ ನರಕಯಾತನೆ ಅನುಭವಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇನ್ನು ಮುಂದೆ ಯಾವುದೇ ರೀತಿಯ ಕುಂಟು ನೆಪ ಹೇಳಿದರೂ ಕೇಳುವುದಿಲ್ಲ. ಕಾಮಗಾರಿಯಲ್ಲಿ ಕಂಡುಬರುತ್ತಿರುವ ಸಣ್ಣಪುಟ್ಟ ಲೋಪದೋಷಗಳನ್ನು ತಕ್ಷಣವೇ ಸರಿಪಡಿಸಿಕೊಂಡು ತ್ವರಿತಗತಿಯಲ್ಲಿ ಕೆಲಸ ನಿರ್ವಹಿಸಬೇಕು.

ಜೂನ್ ಅಂತ್ಯಕ್ಕೆ ಆಗಿರುವ ಪ್ರಗತಿ ಮತ್ತು ಜೂನ್ ಮಾಹೆಯಲ್ಲಿ ಪ್ರಗತಿಯಲ್ಲಿ ಆಗಿರುವ ಕಾಮಗಾರಿಯ ಅಭಿವೃದ್ಧಿ ಕಾರ್ಯಗಳ ಪ್ರಗತಿಯ ಸಂಪೂರ್ಣ ವರದಿ ನೀಡಬೇಕು ಎಂದು ತಾಕೀತು ಮಾಡಿದ ಅವರು, ನಿಗದಿತ ಆಗಸ್ಟ್ ಅವಧಿಗೆ ಮುಖ್ಯ ಮೇಲ್ಸೇತುವೆಯೊಂದಿಗೆ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅತ್ಯಗತ್ಯವಾಗಿರುವ ಸೇವಾ ರಸ್ತೆಯನ್ನು ಸಹ ಪೂರ್ಣಗೊಳಿಸಿ ಬಳಕೆಗೆ ಮುಕ್ತಗೊಳಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಕಾಮಗಾರಿ ಪೂರ್ಣಗೊಳಿಸುವ ಭರದಲ್ಲಿ ಅಧಿಕಾರಿಗಳು ಅಥವಾ ಗುತ್ತಿಗೆದಾರರು ನಿಗದಿತ ಅವಧಿಯೊಳಗೆ ಗುಣಮಟ್ಟದಲ್ಲಿ ರಾಜಿಯಿಲ್ಲದೇ ಕಾಮಗಾರಿ ಪೂರ್ಣಗೊಳಿಸಬೇಕು ಎಂದರು.

ರೈಲ್ವೆ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಯಾವುದೇ ಕಾರಣಕ್ಕೂ ಇನ್ನೂ ವಿಳಂಬ ಧೋರಣೆ ಸಹಿಸುವುದಿಲ್ಲ. ನಿಗದಿಪಡಿಸಿದ ಆಗಸ್ಟ್ ಅಂತ್ಯದ ಗಡುವಿನೊಳಗೆ ಮೇಲ್ಸೇತುವೆ ಸಾರ್ವಜನಿಕ ಸಂಚಾರಕ್ಕೆ ಮುಕ್ತವಾಗಬೇಕು ಎಂದು ಡಿಸಿ ಎಚ್ಚರಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕಿ ಎಸ್. ಜಾಹ್ನವಿ, ಉಪ ವಿಭಾಗಾಧಿಕಾರಿ ವಿವೇಕಾನಂದ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮನೋಹರ್, ಪ್ರಾದೇಶಿಕ ಸಾರಿಗೆ ಅಧಿಕಾರಿ ದಾಮೋದರ, ತಹಶೀಲ್ದಾರ್ ಶೃತಿ.ಎಂ, ಲೋಕೋಪಯೋಗಿ ಇಲಾಖೆಯ ಮುಖ್ಯ ಕಾರ್ಯನಿರ್ವಾಹಕ ಇಂಜಿನಿಯರ್, ರೈಲ್ವೆ ಇಲಾಖೆಯ ಪರವಾಗಿ ನೈಋತ್ಯ ರೈಲ್ವೆ (ಹುಬ್ಬಳ್ಳಿ) ವಿಭಾಗದ ಮುಖ್ಯ ಇಂಜಿನಿಯರ್ ಹಾಗೂ ಕಾಮಗಾರಿಯ ಗುತ್ತಿಗೆದಾರರು ಇದ್ದರು.

ಮನೆ ಮನೆ ಸಮೀಕ್ಷೆ ಮೂಲಕ ಮತದಾರರ ಮಾಹಿತಿ ಸಂಗ್ರಹ : ಸಾರ್ವಜನಿಕರು ಸಹಕರಿಸಬೇಕು: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಬೀದರ್, ಜೂ.04-

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ವಿಶೇಷ ತೀವ್ರ ಪರಿಷ್ಕರಣೆ (Special Intensive Revision-- 2026) ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮತದಾರರ ಪಟ್ಟಿಯನ್ನು ಇನ್ನಷ್ಟು ನಿಖರ, ದೋಷರಹಿತ ಹಾಗೂ ಪಾರದರ್ಶಕಗೊಳಿಸುವ ಉದ್ದೇಶ ಹೊಂದಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

ಬುಧವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯ ಅಂಗವಾಗಿ ಮನೆ ಮನೆ ಸಮೀಕ್ಷೆ ನಡೆಸಲಾಗುವುದು. ಈ ವೇಳೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆಗಳಿಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಸಂಗ್ರಹಿಸಿ ಪರಿಶೀಲಿಸಲಿದ್ದಾರೆ. ಸಂಗ್ರಹಿಸಲಾದ ಮಾಹಿತಿಯ ಆಧಾರದ ಮೇಲೆ ಮತದಾರರ ಪಟ್ಟಿಯ ಪರಿಷ್ಕರಣೆ, ತಿದ್ದುಪಡಿ ಹಾಗೂ ನವೀಕರಣ ಕಾರ್ಯ ಕೈಗೊಳ್ಳಲಾಗುವುದು ಎಂದು ಹೇಳಿದರು.

ಜಿಲ್ಲಾಧಿಕಾರಿಗಳ ಮಾಹಿತಿ ಪ್ರಕಾರ, 2026ರ ಅಕ್ಟೋಬರ್ 1 ಅನ್ನು ಅರ್ಹತಾ ದಿನಾಂಕವಾಗಿ ನಿಗದಿಪಡಿಸಲಾಗಿದೆ. ಜೂನ್ 20ರಿಂದ 29ರವರೆಗೆ ಸಿದ್ಧತೆ ಮತ್ತು ತರಬೇತಿ ಕಾರ್ಯಕ್ರಮ, ಜೂನ್ 30 ರಿಂದ ಜುಲೈ 29ರವರೆಗೆ ಮನೆ ಮನೆ ಸಮೀಕ್ಷೆ, ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ, ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆ, ಅಕ್ಟೋಬರ್ 3ರ ವರೆಗೆ ಅವುಗಳ ವಿಲೇವಾರಿ ಹಾಗೂ ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು.

ಮನೆ ಮನೆ ಸಮೀಕ್ಷೆ ಸಂದರ್ಭದಲ್ಲಿ ಹೊಸದಾಗಿ ಮತದಾನಕ್ಕೆ ಅರ್ಹರಾಗಿರುವವರ ಹೆಸರು ಸೇರ್ಪಡೆ, ಸ್ಥಳಾಂತರಗೊಂಡ ಮತದಾರರ ವಿವರಗಳ ನವೀಕರಣ, ಮೃತರ ಹೆಸರುಗಳ ತೆರವು ಸೇರಿದಂತೆ ಅಗತ್ಯ ತಿದ್ದುಪಡಿಗಳನ್ನು ಕೈಗೊಳ್ಳಲಾಗುವುದು. ಮತದಾರರು ಅಗತ್ಯ ದಾಖಲೆಗಳನ್ನು ಒದಗಿಸಿ ಬಿಎಲ್‌ಒಗಳಿಗೆ ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಮನವಿ ಮಾಡಿದರು.

ಕರಡು ಮತದಾರರ ಪಟ್ಟಿ ಪ್ರಕಟವಾದ ಬಳಿಕ ಸಾರ್ವಜನಿಕರು ತಮ್ಮ ಹೆಸರು, ವಿಳಾಸ ಹಾಗೂ ಇತರ ವಿವರಗಳಲ್ಲಿ ಯಾವುದೇ ದೋಷಗಳಿದ್ದಲ್ಲಿ ನಿಗದಿತ ಅವಧಿಯಲ್ಲಿ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ.

ಸಲ್ಲಿಕೆಯಾ ಗುವ ಅರ್ಜಿಗಳನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮ ಕೈಗೊ ಳ್ಳಲಾಗುವುದು ಎಂದು ತಿಳಿಸಿದರು.

2025ರ ಜನವರಿ 6 ರಂದು ಪ್ರಕಟಗೊಂಡ ಅಂತಿಮ ಮತದಾರರ ಪಟ್ಟಿ ಪ್ರಕಾರ, ಬೀದರ್ ಜಿಲ್ಲೆಯಲ್ಲಿ ಒಟ್ಟು 1,528 ಮತಗಟ್ಟೆಗಳು ಕಾರ್ಯನಿರ್ವಹಿಸುತ್ತಿದ್ದು, 740,462 ಪುರುಷ ಮತದಾರರು ಇದ್ದು, 7059,83 ಮಹಿಳಾ ಮತದಾರರು ಸೇರಿದಂತೆ ಒಟ್ಟು 14,46,445 ಮತದಾರರು ದಾಖಲಾಗಿದ್ದಾರೆ ಎಂದು ಮಾಹಿತಿ ನೀಡಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ಅತ್ಯಂತ ಮಹತ್ವದ ಪ್ರಕ್ರಿಯೆಯಾಗಿದ್ದು, ಎಲ್ಲ ಮತದಾರರು, ರಾಜಕೀಯ ಪಕ್ಷಗಳು ಹಾಗೂ ಸಾರ್ವಜನಿಕರು ಬಿಎಲ್‌ಒಗಳಿಗೆ ಅಗತ್ಯ ಸಹಕಾರ ನೀಡುವ ಮೂಲಕ ಮತದಾರರ ಪಟ್ಟಿಯನ್ನು ಸಂಪೂರ್ಣ, ನಿಖರ ಮತ್ತು ಪಾರದರ್ಶಕಗೊಳಿಸಲು ಕೈಜೋಡಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ. ಕರಾಳ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆ ಪ್ರವಾಹ ಪೀಡಿತ ಪ್ರದೇಶಗಳ ಮೇಲೆ ತೀವ್ರ ನಿಗಾ ವಹಿಸಬೇಕು -ಇಕ್ರಮ್ ಶರೀಫ್



ಕಲಬುರಗಿ,ಜೂ.04-

ಮುಂಗಾರು ಮಳೆ ಆರಂಭವಾಗುತ್ತಿದ್ದಂತೆಯೆ ಬಿತ್ತನೆ ಚಟುವಟಿಕೆಗಳು ಗರಿಗೆದರಲಿದ್ದು, ಕೃಷಿ ಸಂಬಂಧಿತ ಇಲಾಖೆಗಳು ಎಲ್ಲಾ ರೀತಿಯ ಪೂರ್ವ ಸರ್ವ ಸಿದ್ಧತೆ ಮಾಡಿಟ್ಟುಕೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಸೂಚಿಸಿದರು.

ಮುಂಗಾರು ಮಳೆ ಅವಧಿ ಪೂರ್ವ ಸಿದ್ಧತೆ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜೂನ್ ಮಾಹೆಯಲ್ಲಿ ಸುರಿದ ಮಳೆಯಿಂದ ತೋಟಗಾರಿಕೆ ಇಲಾಖೆಯಿಂದ ಮಾತ್ರ 45 ಹೆಕ್ಟೇರ್ ಬೆಳೆ ಹಾನಿ ವರದಿ ಸಲ್ಲಿಸಿದ್ದು, ಕೃಷಿ ಇಲಾಖೆಯಿಂದ ಇನ್ನು ಸಲ್ಲಿಸಿಲ್ಲ. ಸಂಬಂಧಿಸಿದ ಅಧಿಕಾರಿಗಳು ಸರ್ವೆ ಮಾಡಿ ವರದಿ ಸಲ್ಲಿಸಬೇಕೆಂದರು.

ಜಿಲ್ಲೆಯಲ್ಲಿ 11,634 ಮೆಟ್ರಿಕ್ ಟನ್ ಯೂರಿಯಾ, 9,583 ಮೆಟ್ರಿಕ್ ಟನ್ ಡಿ.ಎ.ಪಿ, ಕಾಂಪ್ಲೆಕ್ಸ್ -13,990 ಮೆ.ಟನ್ ಸೇರಿದಂತೆ 38,351 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿದ್ದು, ಈಗಾಗಲೆ ಇದರಲ್ಲಿ ಒಟ್ಟಾರೆ 5-6 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ವಿತರಣೆಯಾಗಿದೆ. ಇನ್ನು ಮಳೆಯಾಗಿಲ್ಲ, ಈಗಲೆ ಬಿತ್ತನೆ ಮಾಡುವುದು ಸರಿಯಲ್ಲ. ರೈತರಿಗೆ ಮಾಹಿತಿ ನೀಡಬೇಕು. ಜಿಲ್ಲೆಯಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಯಾವುದೇ ಕೊರತೆ ಇಲ್ಲ. ತಹಶೀಲ್ದಾರರು ಮತ್ತು ಕೃಷಿ ಇಲಾಖೆಯ ಅಧಿಕಾರಿಗಳು ರೈತಾಪಿ ಜನರಿಗೆ ಅರಿವು ಮೂಡಿಸಬೇಕು ಎಂದರು.

ಜಿಲ್ಲೆಯಾದ್ಯಂತ ಪ್ರವಾಹಕ್ಕೆ ತುತ್ತಾಗುವ ಸುಮಾರು 153 ಗ್ರಾಮಗಳನ್ನು ಗುರುತಿಸಲಾಗಿದೆ. ನೆರೆಯ ಮಹಾರಾಷ್ಟ್ರದ ಅಧಿಕಾರಿಗಳೊಂದಿಗೆ ಸತತ ಸಂಪರ್ಕ ಸಾಧಿಸಿ ಡ್ಯಾಂನಿಂದ ಕೆಳ ಹಂತದ ಪ್ರದೇಶಕ್ಕೆ ನೀರು ಬಿಡುಗಡೆ ಮುನ್ನವೆ ಮಾಹಿತಿ ಪಡೆದು ನದಿ ದಂಡೆಯ ಗ್ರಾಮಸ್ಥರಿಗೆ ಪ್ರಚೂರಪಡಿಸಬೇಕು. ಡಂಗೂರ ಸಾರಬೇಕು. ಸಿಡಿಲಿನಿಂದ ಸಾವು ತಪ್ಪಿಸಲು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಯಾವುದೇ ಕಾರಣಕ್ಕೂ ಪ್ರವಾಹ, ಮಳೆಯಿಂದ ಮಾನವ ಮತ್ತು ಪ್ರಾಣಿ ಹಾನಿಯಾಗದಂತೆ ಎಚ್ಚರ ವಹಿಸಬೇಕೆಂದರು.

ಶಿಥಿಲಾವಸ್ಥೆಯಲ್ಲಿರುವ ಶಾಲಾ, ಅಂಗನವಾಡಿ, ಹಾಸ್ಟೆಲ್ ಕಟ್ಟಡಗಳನ್ನು ಕೂಡಲೆ ಗುರುತಿಸಿ ಸ್ಥಳಾಂತರಿಸಬೇಕು. ಮಳೆಯಿಂದ ಬೆಳೆ, ಆಸ್ತಿ-ಪಾಸ್ತಿ, ರಸ್ತೆ-ಸೇತುವೆ ಹಾನಿಯಾದಲ್ಲಿ 24 ಗಂಟೆ ಒಳಗೆ ಮಾಹಿತಿ ಸಲ್ಲಿಸಬೇಕು. ವಿಳಂಬಕ್ಕೆ ಇಲ್ಲಿ ಅವಕಾಶ ಇಲ್ಲ. ಮಳೆ ಹೆಚ್ಚಾದಲ್ಲಿ, ಪ್ರವಾಹದಿಂದ ರಸ್ತೆ, ಸೇತುವೆ ಸಂಪರ್ಕ ಕಡಿತವಾಗುವ ಸಾಧ್ಯತೆ ಇರುತ್ತದೆ. ಈಗಲೆ ಪರ್ಯಾಯ ಸಾರಿಗೆ ಸಂಪರ್ಕ ಗುರುತಿಸಬೇಕು ಎಂದ ಡಿ.ಸಿ. ಇಕ್ರಮ್ ಶರೀಫ್ ತಿಳಿಸಿದರು.

ಕಂಟ್ರೋಲ್ ರೂಂ ಸ್ಥಾಪಿಸಿ: ಹೆಚ್ಚಿನ ಮಳೆ ಮತ್ತು ನೆರ ಹಾವಳಿ ಪರಿಸ್ಥಿತಿ ಎದುರಾದಲ್ಲಿ ಪ್ರವಾಹದಿಂದ ಸಂತ್ರಸ್ತರು ಸಹಾಯಕ್ಕೆ ಇಂದಿನಿಂದಲೆ ತಾಲೂಕುವಾರು 247 ಕಂಟ್ರೋಲ್ ರೂಂ ಸ್ಥಾಪಿಸಿ ಸಿಬ್ಬಂದಿಗಳನ್ನು ನಿಯೋಜಿಸಬೇಕು ಎಂದು ತಹಶೀಲ್ದಾರರಿಗೆ ಡಿ.ಸಿ. ಇಕ್ರಮ್ ಶರೀಫ್ ತಿಳಿಸಿದರು.

ಎಂಟಿವೇನೋಮ್ ಡೋಸ್ ದಾಸ್ತಾನು ಮಾಡ್ಕೊಳ್ಳಿ:ಮಳೆಗಾಲದಲ್ಲಿ ಸಹಜವಾಗಿ ಹಾವು ಕಚ್ಚಿ ಸಾವನಪ್ಪವವರ ಸಂಖ್ಯೆ ನೋಡುತ್ತೇವೆ. ಇದನ್ನು ತಡೆಯುವ ನಿಟ್ಟನಲ್ಲಿ ಜಿಲ್ಲೆಯ ಎಲ್ಲಾ ಪಿ.ಎಚ್.ಸಿ. ಸಿ.ಎಚ್.ಸಿ, ಆಸ್ಪತ್ರೆಗಳಲ್ಲಿ ಎಂಟಿವೇನೋಮ್ ಡೋಸ್ ದಾಸ್ತಾನು ಇರುವಂತೆ ಡಿ.ಎಚ್.ಓ ಅಗತ್ಯ ಕ್ರಮ ತೆಗೆದುಕೊಳ್ಳಬೇಕು ಎಂದು ಡಿ.ಸಿ. ಇಕ್ರಮ್ ಶರೀಫ್ ನಿರ್ದೇಶನ ನೀಡಿದರು.

ಚರಂಡಿ ಸ್ವಚ್ಚತಾ ಅಭಿಯಾನ ಕೈಗೊಳ್ಳಿ: ಮಳೆ ಅರಂಭವಾದರೆ ಸಾಕು, ತೆರೆದ ಚರಂಡಿಗಳು ಕಸ ಕಡ್ಡಿಯಿಂದ ಬ್ಲಾಕ್ ಆಗಿಯೇ ಹೆಚ್ಚು ನಗರ ಪ್ರದೇಶದಲ್ಲಿ ಸಾರ್ವಜನಿಕರಿಗೆ ಸಮಸ್ಯೆ ಉಂಟು ಮಾಡುತ್ತದೆ. ಈ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿ, ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಮಳೆ ನೀರು ಚರಂಡಿಗಳು, ನಾಲಿಗಳಲ್ಲಿ ಹೂಳೆತ್ತಬೇಕು. ಮಳೆ ಬರುವ ಮುನ್ನವೆ ಸಂಪೂರ್ಣ ಸ್ವಚ್ಚತಾ ಅಭಿಯಾನ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಡಿ.ಸಿ. ಖಡಕ್ ಸೂಚನೆ ನೀಡಿದರು. ಕಾಳಜಿ ಕೇಂದ್ರ ತೆರೆಯಬೇಕು: ಜಿಲ್ಲಾ ಪಂಚಾಯತ್ ಸಿ.ಇ.ಓ ರಾಜುಲ್ ಸಂಕನೂರ್ ಮಾತನಾಡಿ, ಪ್ರವಾಹ ಹೆಚ್ಚಾದಲ್ಲಿ ತಗ್ಗು ಪ್ರದೇಶದಲ್ಲಿರುವ ಜನವಸತಿ ಪ್ರದೇಶಗಳನ್ನು ಸ್ಥಳಾಂತರಿಸಬೇಕಾಗುತ್ತದೆ. ಹೀಗಾಗಿ ಕಾಳಜಿ ಕೇಂದ್ರ ಸಹ ಗುರುತಿಸಬೇಕು. ಮಳೆಯ ನಡುವೆಯೂ ಶುದ್ಧ ಕುಡಿಯುವ ನೀರು ಪೂರೈಕೆಯು ನಮ್ಮ ಆದ್ಯತೆಯಾಗಬೇಕು ಎಂದರು.

ಸಭೆಯಲ್ಲಿ ಡಿ.ಸಿ.ಪಿ. ಶಾಲೂ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ ಸೇರಿದಂತೆ ಜಿಲ್ಲಾ ಮಟ್ಟದ ಇತರೆ ಅಧಿಕಾರಿಗಳು, ತಾಲೂಕಿನ ತಹಶೀಲ್ದಾರರು ಭಾಗವಹಿಸಿದ್ದರು.



ಬೀದರ್‌ನಲ್ಲಿ ಚನ್ನಮ್ಮ ಉತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಯಶಸ್ವಿ

ಬೀದರ, ಜೂ.04-

ಭಾರತ ದೇಶವು ಹಳ್ಳಿಗಳಿಂದ ಕೂಡಿದ ದೇಶವಾಗಿದೆ. ಇಂತಹ ಹಳ್ಳಿ ಕಲಾವಿದರ ಕಲೆ ಮತ್ತು ಸಾಹಿತ್ಯದಲ್ಲಿ ನಾಡಿನ ಪ್ರಜ್ಞೆ ಹಾಗೂ ಸಂಸ್ಕೃತಿಯ ಪರಂಪರೆ ಹಾಸುಹೊಕ್ಕಾಗಿದೆ. ಹೀಗಾಗಿ ದೇಶಿ ಸೊಗಡಿನ ಕಲೆಯನ್ನು ಉಳಿಸಿ ಬೆಳೆಸಿದ ನಿಜವಾದ ಕಲಾವಿದರೆಂದರೆ ಅದು ಜನಪದ ಕಲಾವಿದರು ಎಂದು ಕನ್ನಡ ಜಾನಪದ ಪರಿಷತ್ ಅಕಾಡೆಮಿಯ ಮಹಿಳಾ ಸದಸ್ಯೆ ಮಂಗಲಾ ತಿಳಿಸಿದರು. ಅವರು ಇತ್ತೀಚಿಗೆ ನಗರದ ಪ್ರತಾಪನಗರದ ಹನುಮಾನ್ ಮಂದಿರದ ಕಲ್ಯಾಣ ಮಂಟಪದಲ್ಲಿ ಚನ್ನಮ್ಮ ಕಲಾ ಸಾಹಿತ್ಯ ಸೇವಾ ಸಂಘ (ರಿ) ಬೀದರ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಚನ್ನಮ್ಮನ ಉತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಜನಪದ ಹಾಡಿನಲ್ಲಿ, ನರ್ತನದಲ್ಲಿ ಹಾಗೂ ನಾಟಕ ಪ್ರದರ್ಶನದಲ್ಲಿ ಇಂದಿನ ಕಲಾವಿದರು ಎಷ್ಟೇ ಪ್ರಜ್ಞಾವಂತರಾಗಿದ್ದರೂ ಕೂಡ, ಅಪ್ಪಟ ಜನಪದರ ಮುಂದೆ ಅವರ ಕಲೆ ಗೌಣವಾಗುತ್ತದೆ. ಇಂತಹ ಕಲಾ ಪರಂಪರೆಯನ್ನು ಮತ್ತು ನಿಜವಾದ ಜನಪದ ಕಲಾವಿದರನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಚನ್ನಮ್ಮ ಕಲಾ ಸಾಹಿತ್ಯ ಸೇವಾ ಸಂಘವು ಮಾಡುತ್ತಿರುವುದು ನಿಜಕ್ಕೂ ಪ್ರಶಂಸನೀಯ ಎಂದು ಅವರು ಶ್ಲಾಘಿಸಿದರು.

ಇದೇ ವೇಳೆ ಕಿತ್ತೂರು ರಾಣಿ ಚನ್ನಮ್ಮನವರ ವೀರತ್ವ ಹಾಗೂ ಆದರ್ಶಗಳನ್ನು ಸ್ಮರಿಸಿದ ಅವರು, ವೀರ ಮಹಿಳೆಯರ ಆದರ್ಶಗಳು ಇಂದಿನ ಎಲ್ಲಾ ಮಹಿಳೆಯರಲ್ಲೂ ಮೂಡಿಬರಬೇಕು. ಇಲಾಖೆಯ ಸಹಯೋಗದೊಂದಿಗೆ ಇಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಂಡಿರುವುದು ಅಭಿನಂದನೀಯ. ಬೀದರ್‌ನ ಕಲಾವಿದರು ತಮ್ಮ ಅತ್ಯುತ್ತಮ ಕಲಾ ಪ್ರದರ್ಶನದ ಮೂಲಕ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಬೆಳೆಯುವಂತಾಗಲಿ ಎಂದು ಶುಭ ಹಾರೈಸಿದರು.

ಉತ್ಸವದ ಅಂಗವಾಗಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿವಿಧ ಕಲಾತಂಡಗಳಿಂದ ಮೂಡಿಬಂದ ಪ್ರದರ್ಶನಗಳು ಪ್ರೇಕ್ಷಕರ ಮನ ಗೆದ್ದವು.

ಈ ಕಾರ್ಯಕ್ರಮದಲ್ಲಿ ರೇವಣಪ್ಪ ಮುಲಗೆ, ರಾಜಕುಮಾರ್ ಹುಮನಾಬಾದೆ, ಪ್ರಕಾಶ್ ಕುಲಕರ್ಣಿ, ಲಕ್ಷ್ಮಿ ಚಿಟ್ಟಾ, ಶಿವಕುಮಾರ್, ಮಾಣಿಕ, ರಾಜಕುಮಾರ್ ಸೇರಿದಂತೆ ಇತರರು ಉಪಸ್ಥಿತರಿದ್ದರು. ಮಾಹಾದೇವಿ ಅವರು ಎಲ್ಲರನ್ನೂ ಸ್ವಾಗತಿಸಿದರು, ಕೃಷ್ಣಾ ಅವರು ಕಾರ್ಯಕ್ರಮ ಸಂಚಾಲನೆ ನಡೆಸಿಕೊಟ್ಟರೆ, ಬಸವರಾಜ ಅವರು ವಂದನಾರ್ಪಣೆ ಮಾಡಿದರು.



ಬಿ.ವಿ.ವಿ. ಸಂಘದ ಬಸವೇಶ್ವರ ಕಲಾ ಮಹಾವಿದ್ಯಾಲಯದಲ್ಲಿ ಸರಸ್ವತಿ ಪೂಜೆ

ಜ್ಞಾನದ ಕಲಿಕೆ ಒಂದು ತಪಸ್ಸು : ಮೂಗನೂರಮಠ

ಬಾಗಲಕೋಟೆ,ಜೂ.04-

ಜ್ಞಾನದ ಕಲಿಕೆ ಒಂದು ತಪಸ್ಸು ಇದ್ದಂತೆ ಅದನ್ನು ಸಂಪಾದಿಸಲು ಶ್ರಮ ಮತ್ತು ಆಸಕ್ತಿಯ ಮುಖ್ಯ ಎಂದು ಪಾಚಾರ್ಯ ಎಸ್.ಆರ್. ಮೂಗನೂರಮಠ ಹೇಳಿದರು.

ಅವರು ಬಿ.ವಿ.ವಿ.ಸಂಘದ ಬಸವೇಶ್ವರ ಕಲಾ ಮಹಾವಿದ್ಯಾಲಯದಲ್ಲಿ 2026-27ನೇ ಶೈಕ್ಷಣಿಕ ವರ್ಷದ ಯಶಸ್ಸಿ ಗಾಗಿ ಸರಸ್ವತಿ ದೇವಿಯ ಪೂಜೆಯ ಸಮಾರಂಭದಲ್ಲಿ ಸರಸ್ವತಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯ ಹಾಗೂ ಆಸಕ್ತಿ ಮೂಲಕ ಕಲಿಕಾ ವಿಷಯವನ್ನು ಆಯ್ಕೆ ಮಾಡಿಕೊಳ್ಳಬೇಕು, ಅಂದಾಗ ನಿಮ್ಮ ಸಾಧನೆಯ ಹಾದಿ ಸುಗಮವಾಗಲಿದೆ, ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ, ಮುನಿಯಬೇಡ, ಅನ್ಯರಿಗೆ ಅಸಹ್ಯ ಪಡಬೇಡ,

ತನ್ನ ಬಣ್ಣಿಸಬೇಡ, ಇದಿರ ಹಳಿಯಲು ಬೇಡ. ಇದೇ ಅಂತರಂಗ ಶುದ್ಧಿ, ಇದೇ ಬಹಿರಂಗ ಶುದ್ಧಿ, ಇದೇ ನಮ್ಮ ಕೂಡಲಸಂಗಮದೇ ವರನೊಲಿಸುವ ಪರಿ ಎಂಬ ಬಸವಣ್ಣನವರ ವಚನವನ್ನು ವಿದ್ಯಾರ್ಥಿಗಳು ಸದಾ ಮನದಲ್ಲಿ ಅರಿವುಮಾಡಿಕೊಂಡಾ ಸಾಧನೆಯ ಹಾದಿ ಸುಗಮವಾಗಲಿದೆ ಎಂದರು.

ಕಾರ್ಯಕ್ರಮಕ್ಕೂ ಮುಂಚೆ ಬೀಳೂರು ಗುರುಬಸವಮಹಾಸ್ವಾಮಿಗಳಿಗೆ ಪೂಜೆ ಸಲ್ಲಿಸಲಾಯಿತು, ಇದೆ ಸಂದರ್ಭದಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳನ್ನು ಹೂವು ನೀಡಿ ಆತ್ಮೀಯವಾಗಿ ಸ್ವಾಗತಿಸಲಾಯಿತು.

ವೇದಿಕೆ ಮೇಲೆ ಸಂಗೀತ ವಿಭಾಗದ ಮುಖ್ಯಸ್ಥರು ಡಾ. ಕೆ.ವಿ.ಮಠ ಇದ್ದರು, ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಹೊಸ ಶೈಕ್ಷಣಿಕ ವರ್ಷದ ಯಶಸ್ಸಿಗೆ ಶುಭ ಹಾರೈಸಿದರು.

ತಂಬಾಕು ಸೇವನೆಯಿಂದ ದೇಹದ ಮೇಲೆ ಅನೇಕ ದುಷ್ಪರಿಣಾಮಗಳು ಬಿರುತ್ತವೆ



ಕಲಬುರಗಿ: ಜೂ.04-

ತಂಬಾಕು ಸೇವನೆಯಿಂದ ದೇಹದ ಮೇಲೆ ಅನೇಕ ದುಷ್ಪರಿಣಾಮಗಳು ಬಿರುತ್ತಿದ್ದು, ಇದನ್ನು ತಡೆಗಟ್ಟಲು ಸಾರ್ವಜನಿಕರು ಶ್ರಮಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ. ಎಸ್. ಸಂಕನೂರು ಹೇಳಿದರು.

ಮಂಗಳವಾರ ಜಿಮ್ಸ್ ಆಸ್ಪತ್ರೆಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಲಬುರಗಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ, ಜಿಲ್ಲಾ ಸಮೀಕ್ಷಣಾ ಘಟಕ ಕಲಬುರಗಿ.ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ತಂಬಾಕು ರಹಿತ ದಿನ ಅಂಗವಾಗಿ ಆಯೋಜಿಸಿರುವ ಜಾಥಾ ಕಾರ್ಯಕ್ರಮ ಮತ್ತು ಮಾನವ ಸರಪಳಿ ರಚನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರತಿ ವರ್ಷ ಮೇ 31 ರಂದು ವಿಶ್ವ ತಂಬಾಕು ರಹಿತ ದಿನವನ್ನಾಗಿ ಆಚರಿಸಲಾಗುತ್ತದೆ. ಅದರ ಬದಲು ಇಂದು ನಾವು ಜೂನ್ 2 ರಂದು ಆಚರಿಸಲಾಗುತ್ತಿದೆ ಎಂದು ಹೇಳಿದರು.

ತಂಬಾಕು ಸೇವನೆ ಮಾಡಬಾರದು ಈಗಿನ ವಿದ್ಯಾರ್ಥಿಗಳು ಹಾಳು ಆಗುತ್ತಿವೆ ಸಿಗರೇಟ್, ಗುಂಟಕ ಮಧ್ಯಾಪಾನ ಅನೇಕ ಸೇವನೆಗಳಿಂದ ಇಂದಿನ ಯುವಕರು ಹಾಳು ಆಗುತ್ತಿದ್ದಾರೆ. ಇದನ್ನು ತಡೆಗಟ್ಟಲು ಇಂತಹ ಜಾಥಗಳು ಹಮ್ಮಿಕೊಳ್ಳುವುದರಿಂದ ಅನೇಕರು ಜಾಗೃತ್ತರಾಗುತ್ತಾರೆ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶಾರಣಪ್ಪ ಖ್ಯಾತನಾಳ ಅಧ್ಯಕ್ಷತೆ ವಹಿಸಿ ಮಾತನಾಡಿ, ಜೀವ ಅಮೂಲ್ಯವಾದುದು ಸಿಗರೇಟ್, ಬೀಡಿ, ಗುಟ್ಕಾಗಳಂತಹ ತಂಬಾಕು ಉತ್ಪನ್ನಗಳು ಜೀವವನ್ನು ಕೊಲ್ಲುವ ವಿಷ ಪದಾರ್ಥಗಳಾಗಿವೆ

ಆರೋಗ್ಯದ ಮೇಲಿನ ಹಾನಿ: ತಂಬಾಕು ಸೇವನೆಯಿಂದ ಕ್ಯಾನ್ಸರ್, ಶ್ವಾಸಕೋಶದ ಕಾಯಿಲೆ ಮತ್ತು ಹೃದಯಾಘಾತದಂತಹ ಭೀಕರ ಕಾಯಿಲೆಗಳು ಬರುತ್ತವೆ ಮನೆಯವರಿಗೂ ಅಪಾಯ: ಧೂಮಪಾನ ಮಾಡುವವರ ಪಕ್ಕದಲ್ಲಿರುವ ಧೂಮಪಾನ ಮಾಡದ ವ್ಯಕ್ತಿಗಳಿಗೂ ಶ್ವಾಸಕೋಶದ ತೊಂದರೆಗಳು ಎದುರಾಗುತ್ತವೆ.

ಸಿಗರೇಟ್ ಹೊಗೆಯಲ್ಲಿ ಬದುಕನ್ನು ಸುಡಬೇಡಿ, ಸುಂದರ ಜೀವನವನ್ನು ಕಳೆದುಕೊಳ್ಳಬೇಡಿ. ಕ್ಯಾನ್ಸರ್ ತರುವ ತಂಬಾಕು ಬೇಡ, ಆರೋಗ್ಯ ನೀಡುವ ಸ್ವಚ್ಛ ಗಾಳಿ ಬೇಕು. ತಂಬಾಕು ಮುಕ್ತ ಸಮಾಜ, ನಮ್ಮೆಲ್ಲರ ಸಂಕಲ್ಪ!

ಜಿಲ್ಲಾ ಸಮೀಕ್ಷಣಾಧಿಕಾರಿಗಳು ಮತ್ತು ಜಿಲ್ಲಾ ಕಾರ್ಯಕ್ರಮಾಧಿಕಾರಿಗಳು ಎನ್.ಟಿ.ಸಿ.ಪಿ. ಡಾ. ರಾಕೇಶ ಕಾಂಬಳೆ, ಪ್ರಸ್ತಾವಿಕ ಮಾತನಾಡಿದರು.

ಜಿಲ್ಲಾ ಶಸ್ತ್ರಜ್ಞರು ಹಾಗೂ ಅಧೀಕ್ಷಕರು ಜಿಲ್ಲಾ ಆಸ್ಪತ್ರೆ ಡಾ॥ ರುಕಿಯಾ ಆಸ್ನಾ ರಬಾ ಜಿಲ್ಲಾ ಕಾಲರ ನಿಯಂತ್ರಣಾಧಿಕಾರಿಗಳು ಡಾ. ವಿವೇಕಾನಂದ ರೆಡ್ಡಿ. ತಾಲೂಕು ಆರೋಗ್ಯಾಧಿಕಾರಿಗಳು ಡಾ. ಮಾರುತಿ ಕಾಂಬಳೆ,ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು ಶ್ರೀಮತಿ ಸುಜಾತಾ ಪಾಟೀಲ ಸೋಶಿಯಲ್ ವರ್ಕರ್ ಕು. ಆರತಿ ಧನಶ್ರೀ ಜಿಲ್ಲಾ ತಂಬಾಕು ವ್ಯಾಸನ ಮುಕ್ತ ಸೈಕ್ಯಾಟ್ರಿಕ್ ಕೌನ್ಸಿಲರ್ ಮಂಜುನಾಥ ಕಂಬಾಳಿಮಠ. ಆಪಿಉಣ ಶಶಿಧರ್ ಬಳಿ ಡಿ ಇ ಓ, ರವಿಕುಮಾರ್ ಪೂಜಾರಿ. ಎಲ್ಲಾ ಕಾರ್ಯಕ್ರಮಾಧಿಕಾರಿಗಳು ಮತ್ತು ಎಲ್ಲಾ ತಾಲೂಕಾ ಆರೋಗ್ಯ ಅಧಿಕಾರಿಗಳು, ಪ್ರಾಂಶುಪಾಲರು, ಇಎಸ್‌ಐಸಿ ದಂತ ಮಹಾ ವಿದ್ಯಾಲಯ, ಕಲಬುರಗಿ. ಪ್ರಾಂಶುಪಾಲರು, ಎಚ್‌ಕೆಇಎಸ್ ನಿಜಲಿಂಗಪ್ಪ ದಂತ ಮಹಾ ವಿದ್ಯಾಲಯ, ಕಲಬುರಗಿ. ಪ್ರಾಂಶುಪಾಲರು, ಅಲ್-ಬದರ ದಂತ ಮಹಾ ವಿದ್ಯಾಲಯ, ಕಲಬುರಗಿ. ಮನೋರೋಗ ವಿಭಾಗ, ಜಿಮ್ಸ್ , ದಂತ ವಿಭಾಗ ಜಿಮ್ಸ್ , ಪ್ರಾಂಶುಪಾಲರು ಸ್ಕೋಲ್ ಆಫ್ ನರ್ಸಿಂಗ್, ಜಿಲ್ಲಾ ಆಸ್ಪತ್ರೆ, ಕಲಬುರಗಿ. ಪ್ರಾಂಶುಪಾಲರು ಕಾಲೇಜ ಆಫ್ ನರ್ಸಿಂಗ್, ಜಿಲ್ಲಾ ಆಸ್ಪತ್ರೆ, ಕಲಬುರಗಿ. ಪ್ರಾಂಶುಪಾಲರು ಪ್ಯಾರಾ ಮೇಡಿಕಲ್ ಕಾಲೇಜ, ಜಿಲ್ಲಾ ಆಸ್ಪತ್ರೆ, ಕಲಬುರಗಿ, ಹಾಗೂ ಎಲ್ಲಾ ಕಾಲೇಜಿನ ವಿದ್ಯಾರ್ಥಿಗಳು. ಮಣ್ಣೂರ್ ಮಲ್ಟಿಸ್ಪೆಷಲ್ಟಿ ಆಸ್ಪತ್ರೆ. ಯುನೈಟೆಡ್ ಮಲ್ಟಿಸ್ಪೆಷಲ್ಟಿ ಆಸ್ಪತ್ರೆ ಕಲಬುರಗಿ. ಸಿಬ್ಬಂದಿಗಳು ಭಾವಹಿಸಿದ್ದರು.

ಜಾಥಾ ಕಾರ್ಯಕ್ರಮ : ಜಿಲ್ಲಾ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯ (ಜಿಮ್ಸ್ ಆಸ್ಪತ್ರೆ) ಕಲಬುರಗಿ. ಇಂದ ಜಗತ್ ವೃತ್ತದಲ್ಲಿ ಮಾನವ ಸರಪಳಿ ಮಾಡಲಾಯಿತು. ಬಿ ಎಚ್ ಇ ಅಧಿಕಾರಿ ಶಶಿಧರ್ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

ಒಂದನೇಯ ಪುಟದಿಂದ

ಡಿ.ಕೆ.ಶಿವಕುಮಾರ್ ಸರ್ಕಾರದಲ್ಲಿ ಖಾತೆ ಕಿರಿಕ್ ಶುರು..!

ಡಿ.ಕೆ.ಶಿವಕುಮಾರ್, ಆರ್.ವಿ.ದೇಶಪಾಂಡೆ 8 ಬಾರಿ ಗೆದ್ದಿದ್ದಾರೆ. ಆದರೆ ಕೆಲವು ಸಂದರ್ಭಗಳಲ್ಲಿ ಅವರಿಬ್ಬರೂ ಸೋಲು ಅನುಭವಿಸಿದ್ದಾರೆ.

ಕೃಷ್ಣಭೈರೇಗೌಡ ಅವರು ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಕಂದಾಯ ಸಚಿವರಾಗಿದ್ದರು. ಉತ್ತಮ ಕೆಲಸ ನಿರ್ವಹಿಸಿದ್ದಾರೆಂಬ ಹೆಗ್ಗಳಿಕೆಗೆ ಪಾತ್ರವಾಗಿದ್ದರು. ಆದರೆ ಅವರಿಗೆ ಪ್ರಸ್ತುತ ಕಂದಾಯ ಇಲಾಖೆ ಬದಲಿಗೆ ಜಲ ಸಂಪನೂಲ ಇಲಾಖೆ ನೀಡುವ ಚರ್ಚೆ ನಡೆದಿದೆ.

ಇದಕ್ಕಾಗಿ ಅವರು ಕೂಡ ಅಸಮಾಧಾನ ಹೊಂದಿರುವುದಾಗಿ ತಿಳಿದು ಬಂದಿದೆ.ಬೆಂಗಳೂರು ನಗರಾಭಿವೃದ್ಧಿ, ಜಲ ಸಂಪನೂಲ, ಕಂದಾಯ ಖಾತೆಗಳ ವಿಚಾರವಾಗಿ ತಗಾದೆಗಳು ಕಂಡು ಬಂದಿದ್ದು, ರಾಮಲಿಂಗಾರೆಡ್ಡಿ, ಕೃಷ್ಣಭೈರೇಗೌಡ ತಮ ಅಸಮಾಧಾನವನ್ನು ಹೊರ ಹಾಕಿದ್ದಾರೆ. ಮತ್ತೊಂದೆಡೆ ಕೆ.ಎಚ್.ಮುನಿಯಪ್ಪ ಸಮಾಜ ಕಲ್ಯಾಣ ಇಲಾಖೆಗೆ ಪಟ್ಟು ಹಿಡಿದಿದ್ದಾರೆ.ಉಳಿದಂತೆ ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್-ಕಂದಾಯ, ಯು.ಟಿ.ಖಾದರ್-ಆರೋಗ್ಯ ಮತ್ತು ಕುಟುಂಬಕಲ್ಯಾಣ, ಕೆ.ಎಚ್.ಮುನಿಯಪ್ಪ-ಆಹಾರ ಮತ್ತು ನಾಗರಿಕ ಪೂರೈಕೆ, ಸತೀಶ್ ಜಾರಕಿಹೊಳಿ-ಲೋಕೋಪಯೋಗಿ, ಕೆ.ಜೆ.ಜಾರ್ಜ್-ಇಂಧನ, ಪ್ರವಾಸೋದ್ಯಮ, ಎಂ.ಬಿ.ಪಾಟೀಲ್-ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಭೈರತಿ ಸುರೇಶ್-ಸಾರಿಗೆ, ಪ್ರಿಯಾಂಕ್ ಖರ್ಗೆ-ಗೃಹ, ಮಾಹಿತಿ ತಂತ್ರಜ್ಞಾನ, ಕೃಷ್ಣಭೈರೇಗೌಡ-ಜಲಸಂಪನೂಲ ಅಥವಾ ನಗರಾಭಿವೃದ್ಧಿ, ಈಶ್ವರ್ ಖಂಡ್ರೆ-ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್, ಯತೀಂದ್ರ ಸಿದ್ದರಾಮಯ್ಯ-ಹಿಂದುಳಿದ ವರ್ಗಗಳ ಕಲ್ಯಾಣ, ಶರಣಪ್ರಕಾಶ್ ಪಾಟೀಲ್-ವೈದ್ಯಕೀಯ ಶಿಕ್ಷಣ ಖಾತೆ ನಿರ್ವಹಣೆಯ ಜವಾಬ್ದಾರಿ ವಹಿಸಿಕೊಳ್ಳುವ ಸಾಧ್ಯತೆ ಇದೆ.ಇಂದು ಸಂಜೆಯೊಳಗಾಗಿ ಖಾತೆ ಹಂಚಿಕೆಯ ಅಧಿಕೃತ ಪಟ್ಟಿ ಹೊರ ಬೀಳಲಿದೆ.

ಬೃಹತ್ ತ್ಯಾಜ್ಯ ಉತ್ಪಾದಕರಿಗೆ ಪಾಲಿಕೆ ಆಯುಕ್ತ ಜುಬಿನ್ ಮೋಹಪಾತ್ರ ಎಚ್ಚರಿಕೆ

ನೀಡಿದರು.

ಕಾರ್ಯಾಗಾರದಲ್ಲಿ ಕಲ್ಯಾಣ ಮಂಟಪಗಳು, ಹೋಟೆಲ್‌ಗಳು, ರೆಸ್ಟೋರಂಟ್‌ಗಳು, ಆಸ್ಪತ್ರೆಗಳು, ಕೈಗಾರಿಕಾ ಸಂಸ್ಥೆಗಳು, ಸೂಪರ್ ಮಾರುಕಟ್ಟೆಗಳು, ವಸತಿ ನಿಲಯಗಳು ಹಾಗೂ ಇತರ ಬೃಹತ್ ತ್ಯಾಜ್ಯ ಉತ್ಪಾದಕ ಸಂಸ್ಥೆಗಳ ಪದಾಧಿಕಾರಿಗಳಿಗೆ ತ್ಯಾಜ್ಯದ ಮೂಲ ವಿಂಗಡಣೆ, ಸ್ಥಳೀಯ ಸಂಸ್ಕರಣೆ, ಕಾನೂನುಬದ್ಧ ಕರ್ತವ್ಯಗಳು ಹಾಗೂ ಪರಿಸರ ಸ್ನೇಹಿ ತ್ಯಾಜ್ಯ ನಿರ್ವಹಣಾ ಕ್ರಮಗಳ ಕುರಿತು ಸಮಗ್ರ ಮಾಹಿತಿ ನೀಡಲಾಯಿತು.

ಪಾಲಿಕೆ ಉಪ ಆಯುಕ್ತ ಶರಣಪ್ಪ, ವಲಯ ಸಹಾಯಕ ಆಯುಕ್ತ ಮಲ್ಲಿಕಾರ್ಜುನ ಬಿ.ಎಂ., ಮಹಾನಗರ ಪಾಲಿಕೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿವಿಧ ಸಂಸ್ಥೆಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಜಿಲ್ಲೆಗೆ ಎರಡನೇ ಹಂತದಲ್ಲಿ ದೊರೆಯುವುದೇ ಸಚಿವ ಸ್ಥಾನ?

ಶರಣ ಪ್ರಕಾಶ್ ಪಾಟೀಲ್ ಅವರಿಗೆ ಸಚಿವ ಸ್ಥಾನ ಮುಂದುವರೆದಿದೆ. ಕಲಬುರಗಿ ಹೈಕಮಾಂಡ್ ರಾಜಕೀಯ ಇರುವುದರಿಂದ ಸಚಿವ ಸ್ಥಾನ ಭದ್ರವಾಗಿದೆ. ಆದರೆ ರಾಯಚೂರು ಜಿಲ್ಲೆಗೆ ನಿರಾಸೆಯಾಗಿದೆ. ಎರಡನೇ ಪಟ್ಟಿಯಲ್ಲಿಯಾದರೂ ಜಿಲ್ಲೆಗೆ ಸಚಿವ ಸ್ಥಾನ ಸಿಗಬಹುದೇ? ಜಿಲ್ಲೆಯಲ್ಲಿ ಹೊಸ ಸಂಚಲನ ಉಂಟಾಗುವುದೇ ಎಂದು ಕಾದು ನೋಡೋಣ.

ಜಾತಿ ಲೆಕ್ಕಾಚಾರದಲ್ಲಿಯೇ ಸಚಿವ ಸ್ಥಾನ ಹಂಚಿಕೆ ಮಾಡುವ ಪರಿಣಾಮ ಜಿಲ್ಲಾವಾರು ಸಚಿವ ಸ್ಥಾನ ದೊರೆಯಲಿದೆ ಎಂಬ ನಿರೀಕ್ಷೆಯಾಗಿತ್ತು. ಲಿಂಗಾಯತ ಸಮುದಾಯದಲ್ಲಿ ಶರಣ ಪ್ರಕಾಶ ಪಾಟೀಲ್ ಅವರನ್ನು ಕಳೆದ ಬಾರಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ನೀಡಲಾಗಿತ್ತು. ಈ ಬಾರಿಯಾದರೂ ಹಿರಿಯ ವ್ಯಕ್ತಿ ಹಂಪನಗೌಡ ಬಾದರ್ಲಿ ಅವರಿಗೆ ನೀಡಬೇಕಿತ್ತು ಎಂಬುದು ಜಿಲ್ಲೆಯ ಜನರ ಆಶಯವಾಗಿದೆ.

ರಾಜಕೀಯ ವಲಯಗಳಲ್ಲಿ ಕೇಳಿಬರುತ್ತಿರುವ ಮಾಹಿತಿಯಂತೆ, ಜಿಲ್ಲೆಯಲ್ಲಿ ಬಣಗಳ ನಡುವಿನ ಒಳಗುದ್ದಾಟದಿಂದ ಹಿನ್ನಡೆಯಾಗಿರಬಹುದು ಎಂಬುದು ಜಿಲ್ಲಾ ಸಾರ್ವಜನಿಕ ವಲಯದಲ್ಲಿ ಚರ್ಚೆ ನಡೆಯುತ್ತಿದೆ.

ಕ. ಕರ್ನಾಟಕಕ್ಕೆ ಸಚಿವ ಸಂಪುಟದಲ್ಲಿ ಹೆಚ್ಚಿನ ಪ್ರಾತಿನಿಧ್ಯ ನೀಡಲು ಒತ್ತಾಯ

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ಸಂಪುಟ ದರ್ಜೆಯ ಸಚಿವರನ್ನೇ ಅಧ್ಯಕ್ಷರನ್ನಾಗಿ ನೇಮಿಸಬೇಕೆಂದು ಒತ್ತಾಯಿಸಿದರು. ಈ ಬೇಡಿಕೆಗಳನ್ನು ಸರ್ಕಾರ ಪರಿಗಣಿಸದಿದ್ದರೆ ಕಲ್ಯಾಣ ಕರ್ನಾಟಕದ ಜನರಿಂದ ತೀವ್ರ ಪ್ರತಿಭಟನೆ ಎದುರಿಸಬೇಕಾಗಬಹುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ನಾಗನಗೌಡ ಹರವಿ,ಕವಿತಾ ಭಾಸ್ಕರ್‌ಜಾನ್ ವೆಸ್ಲಿ, ಆರ್. ಬಸವರಾಜ್, ಬಿ. ಬಸವರಾಜ್ ಇದ್ದರು

ಡಾ. ಜಿ. ಪರಮೇಶ್ವರ ಉಪಮುಖ್ಯಮಂತ್ರಿಯಾಗಿ ಪ್ರಮಾಣವಚನ: ಛಲವಾದಿ ಮಹಾಸಭಾದಿಂದ ಸಂಭ್ರಮಾಚರಣೆ

ಅವರ ನೇತೃತ್ವದಲ್ಲಿ ರಾಜ್ಯದ ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯದ ಆಶಯಗಳು ಮತ್ತಷ್ಟು ಬಲಗೊಳ್ಳಲಿ ಎಂದು ಆಶಿಸಲಾಯಿತು.

ನಾರದಗಡ್ಡೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ

ಅಧಿಕಾರಿಗಳಿಗೆ ಸ್ಥಳದಲ್ಲೇ ಸೂಚಿಸಿದರು.

ನಾರದಗಡ್ಡೆಯ ಬ್ರಿಜ್ ನಿಂದ ಕುರುವಕೂಲ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಕೂಡಲೇ ಸುಧಾರಿಸಬೇಕು. ಅಲ್ಲದೆ ನಾರದಗಡ್ಡೆಯಲ್ಲಿ ಇರುವ ಹಳೆ ಬಿಲ್ಡಿಂಗ್ ತೆರವುಗೊಳಿಸಿ, ಹೊಸ ಬಿಲ್ಡಿಂಗ್ ನಿರ್ಮಾಣ ಮಾಡಲು ಅಗತ್ಯ ಕ್ರಮವಹಿಸುವಂತೆ ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ರಾಯಚೂರು ಸಿಪಿಐ ನಿಂಗಪ್ಪ, ಲೋಕೋಪಯೋಗಿ ಇಲಾಖೆಯ ಇಇ ವೆಂಕಟೇಶ ಗಲಗ ಸೇರಿದಂತೆ ವಿವಿಧ ಅಧಿಕಾರಿಗಳು, ಸಿಬ್ಬಂದಿಗಳು, ಸಾರ್ವಜನಿಕರು ಇದ್ದರು.

ಶಾಸಕ ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಲು ಒತ್ತಾಯ

ರಾಜ್ಯದ ಅನೇಕ ವಿಧಾನಸಭಾ ಕ್ಷೇತ್ರಗಳಲ್ಲಿ ಉಪ್ಪಾರ ಸಮಾಜದ ಮತಗಳು ನಿರ್ಣಾಯಕವಾಗಿದ್ದು, ಕಾಂಗ್ರೆಸ್ ಪಕ್ಷದ ಗೆಲುವಿಗೆ ಸಮು ದಾಯದ ಕೊಡುಗೆ ಗಮನಾರ್ಹ ವಾಗಿದೆ. ಆದ್ದರಿಂದ ನೂತನ ಸಚಿವ ಸಂಪುಟದಲ್ಲಿ ಉಪ್ಪಾರ ಸಮಾಜಕ್ಕೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸಿ, ಶಾಸಕ ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಬೇಕು ಎಂದು ಒತ್ತಾಯಿ ಸಿದರು.

ಅಲ್ಲದೆ, ಉಪ್ಪಾರ ಸಮಾಜದ ಹಿರಿಯ ಹಾಗೂ ಮುಂಚೂಣಿ ನಾಯಕರಿಗೆ ವಿಧಾನ ಪರಿಷತ್ ಸದಸ್ಯತ್ವ ನೀಡುವ ಮೂಲಕ ಸಮು ದಾಯದ ರಾಜಕೀಯ ಪ್ರಾತಿನಿಧ್ಯ ವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಕಾಂಗ್ರೆಸ್ ಹೈಕಮಾಂಡ್‌ಗೆ ಮನವಿ ಮಾಡಿದರು.

ರಾಜ್ಯದ ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರಗಳಲ್ಲಿ ಉಪ್ಪಾರ ಸಮಾಜ ನೀಡಿರುವ ಕೊಡುಗೆಯನ್ನು ಪರಿಗಣಿಸಿ, ಸಮುದಾಯಕ್ಕೆ ನ್ಯಾಯ ಯುತ ಸ್ಥಾನಮಾನ ಮತ್ತು ಅವಕಾಶಗಳನ್ನು ಒದಗಿಸಬೇಕೆಂದು ಅವರು ತಿಳಿಸಿದ್ದಾರೆ.

ಸ್ವಂತ ಹಣದಿಂದ ರಸ್ತೆ ದುರಸ್ತಿಗೊಳಿಸಿದ ಶಾಸಕ ತುನ್ನೂರಗೆ ರೈತರಿಂದ ಕೃತಜ್ಞತೆ ಸಲ್ಲಿಕೆ

ವಡಗೇರಾ,ಜೂ.04-

ತಾಲೂಕಿನ ಉಳ್ಳೆ ಸೂಗೂರು ಗ್ರಾಮದಲ್ಲಿ ರೈತರ ಜಮೀನುಗಳಿಗೆ ತೆರಳುವ ರಸ್ತೆ ಸಂಪೂರ್ಣ ಹದಗೆಟ್ಟಿದ್ದು ಅದನ್ನು ದುರಸ್ತಿಗಳಿಸುವಂತೆ ರೈತರು ಶಾಸಕರಲ್ಲಿ ಮನವಿ ಮಾಡಿಕೊಂಡಿದ್ದ ಪರಿಣಾಮ ರೈತರ ಮನವಿಗೆ ಸ್ಪಂದಿಸಿ ಯಾದಗಿರಿ ಮತ ಕ್ಷೇತ್ರದ ಜನಪ್ರಿಯ ಶಾಸಕರಾದ ಚನ್ನಾರೆಡ್ಡಿ ಪಾಟೀಲ್ ತುನ್ನೂರ ರವರು ಸ್ವಂತ ಹಣದಿಂದ ರೈತರು ಜಮೀನಿಗೆ ತೆರಳುವ ರಸ್ತೆಯನ್ನು ದುರಸ್ತಿಗೊಳಿಸಿದ್ದಾರೆ.ಎಂದು ಕಾಂಗ್ರೆಸ್ ಯುವ ಮುಖಂಡರಾದ ಜಲಾಲ ಸಾಬ್ ಮನಗಾರ ಉಳ್ಳೆ ಸೂಗುರು ತಿಳಿಸಿ ಮಾತನಾಡಿದರು. ನಮ್ಮ ಗ್ರಾಮದಲ್ಲಿ ರೈತರು ಜಮೀನುಗಳಿಗೆ ತೆರಳಲು ಸರಿಯಾದ ರಸ್ತೆ ಇಲ್ಲದ ಕಾರಣ ರೈತರಿಗೆ ತುಂಬಾ ತೊಂದರೆ ಆಗುತ್ತಿತ್ತು ಈ ಕುರಿತು ಶಾಸಕರ ಗಮನಕ್ಕೆ ತಂದಾಗ ಸ್ವಂತ ಕಾಳಜಿ ವಹಿಸಿ ಅವರೇ ಹಣವನ್ನು ನೀಡಿ ರಸ್ತೆಗೆ ಮರಮ ಹಾಕಿಸಿ ರಸ್ತೆ ದುರಸ್ತಿಗೊಳಿಸಿದ್ದು ಇದರಿಂದ ರೈತರಿಗೆ ತುಂಬಾ ಅನುಕೂಲವಾಗಿದೆ ಎಂದರು ಅವರ ಈ ರೈತ ಪರ ಕಾಳಜಿಗೆ ಉಳ್ಳೆ ಸೂಗುರು ಗ್ರಾಮದ ಸಾರ್ವಜನಿಕರು ರೈತರು ಶಾಸಕರಿಗೆ ಕೃತಜ್ಞತೆಯನ್ನು ಸಲ್ಲಿಸಿದ್ದಾರೆ

ಮುಂಗಾರು ಮಳೆ: ಸಮನ್ವಯತೆಯಿಂದ ಕೆಲಸ ಮಾಡಲು ಅಧಿಕಾರಿಗಳಿಗೆ ಡಿಸಿ ನಾಗೇಂದ್ರ ಪ್ರಸಾದ್.ಕೆ ನಿರ್ದೇಶನ



ಬಳ್ಳಾರಿ,ಜೂ.04-

ಮುಂಗಾರು ಅವಧಿಯಲ್ಲಿ ಎದುರಾಗಬಹುದಾದ ಪ್ರವಾಹ ಪರಿಸ್ಥಿತಿ ಮತ್ತು ಭಾರೀ ಮಳೆಯಿಂದ ಉಂಟಾಗುವ ಹಾನಿಗಳನ್ನು ತಡೆಗಟ್ಟಲು ಎಲ್ಲಾ ಇಲಾಖೆಗಳು ಸಮನ್ವಯ ತೆಯಿಂದ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಕಟ್ಟುನಿಟ್ಟಿನ ಆದೇಶ ನೀಡಿದರು.

ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮುಂಗಾರು ಪೂರ್ವಸಿದ್ಧತೆ ಹಾಗೂ ಕುಡಿಯುವ ನೀರು ಪೂರೈಕೆ ಕುರಿತು ಬುಧವಾರ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮುಂಬರುವ ಮುಂಗಾರು ಮಳೆ ಎದುರಿಸಲು ಹಾಗೂ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆ ಯಾಗದಂತೆ ಅಗತ್ಯ ಮುನ್ನೆಚ್ಚಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದರು. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ವರದಿ ಅನ್ವಯ, ಮುಂದಿನ ಒಂದು ವಾರಗಳ ಕಾಲ ಹೆಚ್ಚು ಮಳೆಯಾಗುವ ಸಾಧ್ಯತೆ ಇದೆ ಎಂದು ಮುನ್ಸೂಚನೆ ಇದ್ದು, ಭಾರೀ ಮಳೆ ಅಥವಾ ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಜಿಲ್ಲಾಡಳಿತವು ಸಂಪೂರ್ಣ ಸನ್ನದ್ಧವಾಗಿದೆ ಎಂದರು.

ಮುಂಗಾರು ಪ್ರವೇಶವಾಗಿದ್ದು, ಜಿಲ್ಲೆಯ ಎಲ್ಲಾ ಪ್ರಮುಖ ಚರಂಡಿಗಳು, ನಾಲಾಗಳು ಮತ್ತು ನೀರು ಹರಿಯುವ ಮಾರ್ಗಗಳ ಹೂಳು ತೆಗೆದು ನೀರು ಸರಾಗವಾಗಿ ಹರಿಯುವಂತೆ ಮಾಡಲು ಸ್ಥಳೀಯ ಸಂಸ್ಥೆಗಳು ಹಾಗೂ ನೀರಾವರಿ ಇಲಾಖೆ ಮುಂದಾಗಬೇಕು. ಕಲ್ವರ್ಟ್‌ಗಳಲ್ಲಿನ ಬ್ಲಾಕೇಜ್‌ಗಳನ್ನು ತೆರವುಗೊಳಿಸಲು ಮತ್ತು ಹಾನಿಗೊಳಗಾದ ಚರಂಡಿ ಸ್ಲ್ಯಾಬ್‌ಗಳನ್ನು ತಕ್ಷಣ ಬದಲಾಯಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾ ಮಟ್ಟದಲ್ಲಿ 24★7 ಕಾರ್ಯನಿರ್ವಹಿಸುವ 'ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ,' ಹಾಗೂ ನಿಯಂತ್ರಣ ಕೊಠಡಿಗಳನ್ನು ಸಕ್ರಿಯವಾಗಿದೆ. ಮಳೆಯ ತೀವ್ರತೆಯ ಆಧಾರದ ಮೇಲೆ ಹೈ, ಮೀಡಿಯಂ ಮತ್ತು ಲೋ ರಿಸ್ಕ್ ಪ್ರದೇಶಗಳನ್ನು ಗುರುತಿಸಿ ತಕ್ಷಣವೇ ಮುನ್ಸೂಚನೆ ರವಾನಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಪ್ರವಾಹ ಪೀಡಿತ ಸೂಕ್ಷ್ಮ ಪ್ರದೇಶಗಳಲ್ಲಿ ಲೈಫ್ ಗಾರ್ಡ್ಸ್, ಬೋಟ್‌ಗಳು, ಲೈಫ್ ಜಾಕೆಟ್‌ಗಳು ಮತ್ತು ಸುರಕ್ಷತಾ ರೋಪ್‌ಗಳನ್ನೊಳಗೊಂಡ ರಕ್ಷಣಾ ತಂಡಗಳನ್ನು ಸನ್ನದ್ಧ ಸ್ಥಿತಿಯಲ್ಲಿ ಇರಿಸಲು ಅಗ್ನಿಶಾಮಕ, ಪೊಲೀಸ್ ಮತ್ತು ಹೋಂಗಾರ್ಡ್ ಇಲಾಖೆಗಳಿಗೆ ಜವಾಬ್ದಾರಿ ವಹಿಸಿದರು.

ಮಳೆಗೆ ಕುಸಿಯಬಹುದಾದ ಹಳೆಯ ಹಾಗೂ ಅಪಾಯಕಾರಿ ಮನೆಗಳನ್ನು ತಾಲೂಕುವಾರು ಗುರುತಿಸಿ, ಅಲ್ಲಿ ವಾಸಿಸುವ ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಸೂಚಿಸಬೇಕು. ನದಿ ಪಾತ್ರದ ಅನಧಿಕೃತ ಒತ್ತುವರಿಗಳನ್ನು ತೆರವುಗೊಳಿಸಬೇಕು. ಅದರಂತೆ ಶಿಥಿಲಗೊಂಡ ಹಳೆಯ ಕಟ್ಟಡಗಳ ಶಾಲೆಗಳ ಗೋಡೆ, ಅಂಗನವಾಡಿ ಕೇಂದ್ರಗಳಿದ್ದಲ್ಲಿ ಅಂತಹವುಗಳನ್ನು ಗುರುತಿಸಿ ಕೂಡಲೇ ಸ್ಥಳಾಂತರಿಸಲು ಮುಂದಾಗಬೇಕು ಎಂದರು.

ಪ್ರವಾಹ ಅಥವಾ ತುರ್ತು ಸಂದರ್ಭಗಳಲ್ಲಿ ತಕ್ಷಣವೇ ಕುಡಿಯುವ ನೀರು ಒದಗಿಸಲು ಟ್ಯಾಂಕರ್‌ಗಳನ್ನು ಸಿದ್ಧವಾಗಿಟ್ಟುಕೊಳ್ಳಲು ಹಾಗೂ ಜಿಲ್ಲೆಯ ಎಲ್ಲಾ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸುಸ್ಥಿತಿಯಲ್ಲಿ ನಿರ್ವಹಿಸಲು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನಗರಾಭಿವೃದ್ಧಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಏಪ್ರಿಲ್ 1 ರಿಂದ ಮೇ 31 ರವರೆಗಿನ ಮುಂಗಾರು ಪೂರ್ವ ಅವಧಿಯಲ್ಲಿ ಸಂಭವಿಸಿದ ಮಳೆ, ಬಿರುಗಾಳಿ ಹಾಗೂ ಸಿಡಿಲಿನಿಂದ ಉಂಟಾದ ಹಾನಿಗಳ ವಿವರಗಳನ್ನು ಸಭೆಯಲ್ಲಿ ಪರಿಶೀಲಿಸಿದ ಜಿಲ್ಲಾಧಿಕಾರಿಯವರು, ಮನೆ ಹಾನಿ, ಜೀವಹಾನಿ ಹಾಗೂ ಜಾನುವಾರು ಹಾನಿಗೆ ಸಂಬಂಧಿಸಿದಂತೆ ಕೂಡಲೇ ಪರಿಹಾರ ತಲುಪಿಸಬೇಕು ಎಂದರು.

ತಾಲೂಕು ಕಚೇರಿಗಳ ತಂಡಗಳಿಂದ ಹಾನಿಗೊಳಗಾದ ಮನೆಗಳ ಜಂಟಿ ಸಮೀಕ್ಷೆ ನಡೆಸಿ, ಪೂರ್ಣ, ತೀವ್ರ ಹಾಗೂ ಭಾಗಶಃ ಹಾನಿಗೊಳಗಾದ ಮನೆಗಳನ್ನು ಪರಿಶೀಲಿಸಿ ಬಾಕಿ ಇರುವ ಪರಿಹಾರ ಹಣವನ್ನು ಶೀಘ್ರವೇ ಬಿಡುಗಡೆ ಮಾಡಬೇಕು. ಬಿರುಗಾಳಿ-ಮಳೆಗೆ ಹಾನಿಗೊಳಗಾದ ವಿದ್ಯುತ್ ಕಂಬಗಳು ಹಾಗೂ ಟ್ರಾನ್ಸ್ ಫಾರ್ಮರ್‌ಗಳನ್ನು ತಕ್ಷಣವೇ ದುರಸ್ತಿಗೊಳಿಸಲು ಮತ್ತು ಯಾವುದೇ ವಿಪತ್ತಿನ ಸಂದರ್ಭದಲ್ಲಿ 6 ರಿಂದ 12 ಗಂಟೆಗಳ ಒಳಗಾಗಿ ವಿದ್ಯುತ್ ಸಂಪರ್ಕವನ್ನು ಮರುಸ್ಥಾಪಿಸಬೇಕು. ವಿದ್ಯುತ್ ಸಂಪರ್ಕಕ್ಕೆ ಅಡ್ಡಿಯಾಗುವ ಹಳೆಯ ಮರ- ಕೊಂಬೆಗಳನ್ನು ಕೂಡಲೇ ತೆರವುಗೊಳಿಸಬೇಕು ಎಂದು ಜೆಸ್ಕಾಮ್, ಅರಣ್ಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯ ರೈತರಿಗೆ ಸಕಾಲದಲ್ಲಿ ರಸಗೊಬ್ಬರ (ಯೂರಿಯಾ ಇತ್ಯಾದಿ) ಹಾಗೂ ಗುಣಮಟ್ಟದ ಬಿತ್ತನೆ ಬೀಜಗಳನ್ನು ದಾಸ್ತಾನು ಮಾಡಿಕೊಂಡು ಯಾವುದೇ ಕೊರತೆಯಾಗದಂತೆ ವಿತರಿಸಬೇಕು ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು. ನಿರಂತರ ಮಳೆಯಿಂದಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇದ್ದು, ನಿಯಮಿತವಾಗಿ ಫಾಗಿಂಗ್ ಕಾರ್ಯ ಕೈಗೊಳ್ಳಬೇಕು ಎಂದರು.

ಯಾವುದೇ ಇಲಾಖೆಯ ಅಧಿಕಾರಿಗಳು ಕೇಂದ್ರ ಸ್ಥಾನ ಬಿಟ್ಟು ಹೋಗಬಾರದು. ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆಯಡಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ ಅವರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ತಹಶೀಲ್ದಾರರು ಸತತ ಸಂಪರ್ಕದಲ್ಲಿದ್ದು, ಸಾರ್ವಜನಿಕರ ದೂರುಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ವಿಡಿಯೋ ಸಂವಾದದ ಮೂಲಕ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್. ಮಂಜುನಾಥ, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿಡಿಯೋ ಸಂವಾದದ ಮೂಲಕ ಎಲ್ಲಾ ತಾಲ್ಲೂಕು ತಹಶೀಲ್ದಾರರು, ನಗರ ಸ್ಥಳೀಯ- ಸಂಸ್ಥೆಗಳ ಮುಖ್ಯಾಧಿಕಾರಿಗಳು ಭಾಗವಹಿಸಿದ್ದರು.

ಪ್ರೀತಿಯ ಮಾತುಗಳೆ ನೆಮ್ಮದಿಯ ಬದುಕಿನ ಜೀವಾಳ, ಮುಕ್ತ ಸಂವಹನ ಅಗತ್ಯ



ಬಾಗಲಕೋಟೆ ,ಜೂ.04-

ಇಂದಿನ ಆಧುನಿಕ ತಂತ್ರಜ್ಞಾನದ ಕಾಲಘಟ್ಟದಲ್ಲಿ ಹಿರಿಯರು ಕೌಟುಂಬಿಕ ಮತ್ತು ಸಾಮಾಜಿಕ ಸಾಮರಸ್ಯದ ಬದುಕಿಗೆ ಪ್ರೀತಿಯ ಮಾತುಗಳಿಂದ ನೆಮ್ಮದಿ ಪಡೆಯಲು ಸಾಧ್ಯವಿದ್ದು ಕೌಟುಂಬಿಕ ಸದಸ್ಯರಲ್ಲಿ ಮುಕ್ತ ಸಂವಹನ ಅಗತ್ಯವಾಗಿದೆ ಎಂದು ಉಪನ್ಯಾಸಕ ಡಾ. ಚಂದ್ರಶೇಖರ ಕಾಳನ್ನವರ ಹೇಳಿದರು.

ಅವರು ನಗರದ ಬಾಗಲಕೋಟಿ ಜಮುಖಾನ ಆವರಣದಲ್ಲಿ ರವಿವಾರ ನಡೆದ ಬಾಗಲಕೋಟೆ ಹಿರಿಯ ನಾಗರಿಕರ ಸೇವಾ ಸಂಘದ ಮಾಸಿಕ ಉಪನ್ಯಾಸ ಕಾರ್ಯಕ್ರಮದಲ್ಲಿ ಇಳೆ ಸಂಜೆಯಲಿ ಬದುಕಿನ ನೆಮ್ಮದಿಗಾಗಿ ಹಿರಿಯರಿಗೆ ಕುಟುಂಬ ಸದಸ್ಯರೊಂದಿಗೆ ಹೊಂದಾಣಿಕೆ ಅನಿವಾರ್ಯತೆ ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಅವರು ಇಂದು ಕುಟುಂಬದ ಸದಸ್ಯರು ತಮ್ಮ ಮನೆಯ ತಂದೆ-ತಾಯಿ ಮತ್ತು ಹಿರಿಯರನ್ನು ಪ್ರೀತಿಯಿಂದ ಪೋಷಿಸುವ ಪಾಲನೆ ಮಾಡುವ ಪರಂಪರೆ, ಸಂಪ್ರದಾಯ ನಮ್ಮ ಕನ್ನಡ ನೆಲದ ಗುಣಧರ್ಮವಾಗಿದೆ.

ಇಂದಿನ ಕೌಟುಂಬಿಕ ಜಗತ್ತು ಮೊಬೈಲ್, ಟಿ.ವಿ, ಕಂಪ್ಯೂಟರ್ ಮಂತ್ರಗಳಲ್ಲಿ ತೊಡಗಿರುವದರಿಂದ ಮನೆಯ ಹಿರಿಯರಿಗೆ ಕುಟುಂಬದಲ್ಲಿ ನೆಮ್ಮದಿ ಸಾಮರಸ್ಯದ ಬದುಕು ಸಾಗಿಸಲು ಕಷ್ಟವಾಗುತ್ತಿದೆ ಎಂಬ ವಾತಾವರಣ ಸೃಷ್ಟಿಯಾಗುತ್ತಿದೆ, ಕುಟುಂಬದ ಸಂಬಂಧಗಳು ವ್ಯಕ್ತಿಯ ಭಾವನಾತ್ಮಕ ಯೋಗಕ್ಷೇಮ, ಮಾನಸಿಕ ಆರೋಗ್ಯ ಮತ್ತು ಸಾಮಾಜಿಕ ಬೆಳವಣಿಗೆಗೆ ಬುನಾದಿಯಾಗಿದೆ, ಸಕಾರಾತ್ಮಕ ಸಂಬಂಧಗಳು ವ್ಯಕ್ತಿಗೆ ಸುರಕ್ಷತೆಯ ಭಾವನೆಯನ್ನು ನೀಡುತ್ತವೆ ಮತ್ತು ಒತ್ತಡವನ್ನು ನಿಭಾಯಿಸಲು ಸಹಾಯ ಮಾಡುತ್ತವೆ. ಕೌಟುಂಬಿಕ ಸದಸ್ಯರಲ್ಲಿ ಮುಕ್ತ ಸಂವಹನ ಅಗತ್ಯವಾಗಿದ್ದು ಪರಸ್ಪರ ಗೌರವದಿಂದ ಕೌಟುಂಬಿಕ ಬಾಂಧವ್ಯವನ್ನು ಗಟ್ಟಿಗೊಳಿಸಬೇಕಾದ ಅನಿವಾರ್ಯತೆ ಇದೆ, ಕುಟುಂಬವು ಸಮಾಜದ ಬಹು ಮುಖ್ಯ ಅಂಗವಾಗಿದೆ. ಬಹಳಷ್ಟು ಸಂದರ್ಭಗಳಲ್ಲಿ ಮಕ್ಕಳು ಜನರೊಂದಿಗೆ ಬೆರೆತು ಸಾಮಾಜಿಕವಾಗಿ ಸಮರ್ಥರಾಗಲು ಕುಟುಂಬ ಒಂದು ಅಗತ್ಯ ಸಂಸ್ಥೆಯಾಗಿ ನಿಲ್ಲುತ್ತದೆ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಹಿರಿಯ ನಾಗರಿಕರ ಸೇವಾ ಸಂಘದ ಅಧ್ಯಕ್ಷರಾದ ಮುರಿಗೆಪ್ಪ ಹುಲಗಬಾಳ ಅವರು ಸಾಮಾಜಿಕ ಮತ್ತು ಕೌಟುಂಬಿಕ ವ್ಯವಸ್ಥೆಯಲ್ಲಿ ಹಿರಿಯರಿಗೆ ಸೂಕ್ತವಾದ ಪ್ರೀತಿಯಿಂದ ಸ್ವಾಭಿಮಾನದ ಜೀವನ ನಡೆಸಲು ಕುಟುಂಬದ ಸದಸ್ಯರ ಹೊಂದಾಣಿಕೆ ಅಗತ್ಯವಾಗಿದೆ ಎಂದು ಹೇಳಿದರು.



ಹೊಸ ಮುರನಾಳದಲ್ಲಿ ಅರ್ಥಪೂರ್ಣ ಶಾಲಾ ಪ್ರಾರಂಭೋತ್ಸವ

ಬಾಗಲಕೋಟೆ,ಜೂ.04-

ಸಮಿಪದ ಮುರನಾಳ ಪುನರ್ವಸತಿ ಕೇಂದ್ರದಲ್ಲಿರುವ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರಶಾಲಾ ಪ್ರಾರಂಭೋತ್ಸ ವನ್ನು ಅತ್ಯಂತ ವಿಜೃಂಬಣೆಯಿಂದ ಅರ್ಥ ಪೂರ್ಣವಾಗಿ ಆರಂಭಿಸಲಾಯಿತು.

ಈ ವರ್ಷದ ಶಿಕ್ಷಣದ ಧ್ಯೇಯವಾಕ್ಯದಂತೆ ಉತ್ತಮ ಕಲಿಕೆ, ಉಜ್ವಲ ಭವಿಷ್ಯದ ಆಶಯದಂತೆ ಕಲಿಕೆಕೆ ಸೂಕ್ತ ವಾತಾವರಣವನ್ನು ಕಲ್ಪಿಸಲು ಶಾಲೆಯನ್ನು ತಳಿರು ತೋರಣಗಳಿಂದ ಶೃಂಗರಿಸಿ ಚಿತ್ತಾಕರ್ಷವಾದ ರಂಗೋಲಿಯನ್ನು ಬಿಡಿಸಿ ಶಾಲೆಯನ್ನು ಮದುವಣಗಿತ್ತೆಯಂತೆ ಅಲಂಕರಿಸಲಾಗಿತ್ತು, ಶಾಲೆಯ ಎಸ್‌ಡಿಎಮ್‌ಸಿ ಅಧ್ಯಕ್ಷರು, ಸರ್ವದಸದ್ಯರು, ಮುಖ್ಯ ಗುರುಗಳು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸೇರಿ ಗ್ರಾಮದಲ್ಲಿ ಪ್ರಭಾತ ಪೇರಿ ನಡೆಸಲಾಯಿತು, ಮುಖ್ಯವಾಗಿ ಇಲಾಖೆಯು ನೂತನವಾಗಿ ಅನುಷ್ಠಾನಗೊಳಿಸಿರುವ ದ್ವಿಭಾಷಾ ಭೋಧನೆಯ ಬಗ್ಗೆ ಸರ್ಕಾರದ ಸೌಲಭ್ಯಗಳ ಕುರಿತು ಪ್ರಚಾರ ಮಾಡಲಾಯಿತು,

ಇಂದು ನಡೆದ ದಾಕಲಾತಿ ಆಂದೋಲನದ ಮೂಲಕ ಶಾಲೆಗೆ ದಾಖಲಾಗುವ ಎಲ್ಲ ಮಕ್ಕಳನ್ನು ಹೂವುಗಳ ಸುರಿಮಳೆ ಸುರಿಸುವ ಮೂಲಕ ಮಕ್ಕಳನ್ನು ಸ್ವಾಗತಿಸಿ, ಎಲ್ಲ ಮಕ್ಕಳಿಗೂ ಉಚಿತ ಪಠ್ಯ ಪುಸ್ತಕವನ್ನು ವಿತರಿಸಲಾಯಿತು, ಇದೇ ಸಂದರ್ಭದಲ್ಲಿ ಮುಖ್ಯ ಗುರುಗಳಾದ ಎಸ್.ಎಮ್.ಪಲ್ಲೇದ ಅವರು ಸ್ಕೂಲ್ ಬ್ಯಾಗ್, ನೋಟ್ ಬುಕ್,ಪೆನ್, ಪೆನ್ಸಿ ಲ್ ನ್ನು ನೀಡಿದರು, ಶಾಲಾ ಪ್ರಾರಂಭೋತ್ಸ ವದ ಪ್ರಯುಕ್ತ ಎಲ್ಲ ಮಕ್ಕಳಿಗೂ ಪಾಲಕರಿಗೂ ಸಿಹಿ ಹಂಚಿ ಶಾಲಾ ಪ್ರಾರಂಭೋತ್ಸ ವನ್ನು ಅರ್ಥಪೂರ್ಣವಾಗಿ ಆಚರಿಸಿದರು.

ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಕಾರ್ಯ ಪಾರದರ್ಶಕವಾಗಿರಲಿ : ಡಿಸಿ

ಬಾಗಲಕೋಟೆ, ಜೂ.04-

ಜಿಲ್ಲೆಯಾದ್ಯಂತ ಜೂನ್ 30 ರಿಂದ ಆರಂಭಗೊಳ್ಳಲಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯವನ್ನು ಪರಿಣಾಮಕಾರಿಯಾಗಿ ಹಾಗೂ ಪಾರದರ್ಶಕವಾಗಿ ಅನುಷ್ಠಾನಗೊಳಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅವರು ಅಧಿಕಾರಿಗಳಿಗೆ ತಿಳಿಸಿದರು. ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಮಂಗಳವಾರ ಬಿ.ಎಲ್.ಓ, ಸೂಪರವೈಜರ್ ಹಾಗೂ ಎ.ಎಲ್.ಎಂ.ಟಿಗಳಿಗೆ ಹಮ್ಮಿಕೊಂಡ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್) ಕುರಿತ ತರಬೇತಿ ಕಾರ್ಯಾಗಾರವನ್ನು ಉದ್ದೇಶಿಸಿ ಅವರು ಮಾತನಾಡಿದರು. ಮತದಾರ ಪಟ್ಟಿಯು ಚುನಾವಣೆ ಪ್ರಕ್ರಿಯೆಯ ಮೂಲಾಧಾರ ಆಗಿರುವದರಿಂದ ಯಾವುದೇ ಲೋಪದೋಷಗಳಿಗೆ ಅವಕಾಶ ನೀಡದೇ ಕಾರ್ಯನಿರ್ವಹಿಸಬೇಕು. ನಿಗದಿತ ವೇಳಾ ಪಟ್ಟಿಯೊಳಗಾಗಿ ಪರಿಷ್ಕರಣೆ ಕಾರ್ಯ ಪೂರ್ಣಗೊಳಿಸಲು ತಿಳಿಸಿದರು. ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಮಾತನಾಡಿ ಅರ್ಹ ಮತದಾರರು ಮತದಾರರ ಪಟ್ಟಿಯಲ್ಲಿ ಇರಬೇಕೆಂಬುದೇ ಎಸ್.ಐ.ಆರ್‌ನ ಮೂಲ ಉದ್ದೇಶವಾಗಿದೆ.

ತರಬೇತಿಯ ಸಂಪನ್ಮೂಲ ವ್ಯಕ್ತಿಗಳಾದ ಸಂಗಮೇಶ ಸನತಂಗಿ ಅವರು ತರಬೇತಿ ನೀಡಿದರು. ತರಬೇತಿಯಲ್ಲಿ ಮತದಾರ ಪಟ್ಟಿಗೆ ಹೊಸ ಹೆಸರು ಸೇರ್ಪಡೆ, ಹೆಸರು ತಿದ್ದುಪಡಿ, ವಿಳಾಸ ಬದಲಾವಣೆ, ಮೃತ ಹಾಗೂ ಸ್ಥಳಾಂತರಗೊಂಡ ಮತದಾರರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡುವ ಪ್ರಕ್ರಿಯೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಮತಗಟ್ಟೆ ಮಟ್ಟದ ಅಧಿಕಾರಿಗಳು ಕ್ಷೇತ್ರದಲ್ಲಿ ಮನೆ ಮನೆಗೆ ಭೇಟಿ ನೀಡಿ ಮಾಹಿತಿಯನ್ನು ಸಂಗ್ರಹಿಸುವಾಗ ಅನುಸರಿಸಬೇಕಾದ ನಿಯಮಗಳು ಹಾಗೂ ಮಾರ್ಗಸೂಚಿಗಳ ಬಗ್ಗೆ ವಿವರವಾಗಿ ತಿಳಿಸಲಾಯಿತು.

ದೇಶಿ ಕಲೆ ಉಳಿಸುವಲ್ಲಿ ಯುವತಿ ಸಂಘದ ಶ್ರಮ ಶ್ಲಾಘನೀಯ

ಬೀದರ, ಜೂ.04-

ಭಾರತ ದೇಶವು ಹಳ್ಳಿಗಳಿಂದ ಕೂಡಿದ ದೇಶವಾಗಿದೆ. ಇಂತಹ ಹಳ್ಳಿ ಕಲಾವಿದರ ಕಲೆ ಹಾಗೂ ಸಾಹಿತ್ಯದಲ್ಲಿ ನಾಡಿನ ಪ್ರಜ್ಞೆ ಮತ್ತು ಸಂಸ್ಕೃತಿಯ ಪರಂಪರೆ ಹಾಸುಹೊಕ್ಕಾಗಿದೆ. ಹೀಗಾಗಿ ದೇಶಿ ಸೊಗಡಿನ ಕಲೆಯನ್ನು ಉಳಿಸಿ ಬೆಳೆಸಿದ ನಿಜವಾದ ಕಲಾವಿದರೆಂದರೆ ಅದು ಜನಪದ ಕಲಾವಿದರು ಎಂದು ಹಿರಿಯ ಕಲಾವಿದರಾದ ಪ್ರಕಾಶ್ ಅವರು ಅಭಿಪ್ರಾಯಪಟ್ಟರು.

ಅವರು ಇತ್ತೀಚಿಗೆ ನಗರದ ಪಾಂಡುರಂಗ ಮಂದಿರದಲ್ಲಿ ಓನಕೆ ಓಬ್ಬವ್ವ ಯುವತಿ ಸಂಘ (ರಿ) ಬೀದರ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸ 'ಲಾಗಿದ್ದ ಓನಕೆ ಓಬ್ಬವ್ವ ಉತ್ಸವ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.



ಇಂದಿನ ಕಲಾವಿದರು ಜನಪದ ಹಾಡು, ನರ್ತನ ಹಾಗೂ ನಾಟಕ ಪ್ರದರ್ಶನದಲ್ಲಿ ಎಷ್ಟೇ ಪ್ರಜ್ಞಾವಂತರಾಗಿದ್ದರೂ ಸಹ, ಅಪ್ಪಟ ಜನಪದರ ಮುಂದೆ ಅವರ ಕಲೆ ಗೌಣವಾಗುತ್ತದೆ. ಅಂತಹ ನಿಜವಾದ ಜನಪದ ಕಲಾವಿದರನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಇಂದು ಓನಕೆ ಓಬ್ಬವ್ವ ಯುವತಿ ಸಂಘ ಮಾಡುತ್ತಿರುವುದು ನಿಜಕ್ಕೂ ಪ್ರಶಂಸನೀಯ ಎಂದರು.

ಇದೇ ವೇಳೆ ವೀರ ಮಹಿಳೆ ಓನಕೆ ಓಬ್ಬವ್ವರ ಶೌರ್ಯ ಮತ್ತು ಆದರ್ಶಗಳನ್ನು ಇಂದಿನ ಮಹಿಳೆಯರು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದ ಅವರು, ಇಲಾಖೆಯ ಸಹಯೋಗದೊಂದಿಗೆ ಸಂಘವು ಇಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಂಡಿರುವುದಕ್ಕೆ ಅಭಿನಂದನೆ ಸಲ್ಲಿಸಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಗೋವು ರಾಷ್ಟ್ರೀಯ ಪ್ರಾಣಿಯಲ್ಲ, ತಾಯಿಯಲ್ಲ; ಬಿಜೆಪಿಯ ಮತಬ್ಯಾಂಕ್



'ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸುವ ಅಗತ್ಯವಿಲ್ಲ. ಅದು ತಾಯಿಗೆ ಸಮಾನ ಎಂದ ಯೋಗಿಯ ಹೇಳಿಕೆ ಈಗ ವಿವಾದಕ್ಕೆ ಗುರಿಯಾಗಿದೆ. ಗೋವು ಕುರಿತ ದ್ವಂದ್ವ ನಿಲುವು ಬಯಲಾಗಿದೆ. ಆಡುವುದು ಒಂದು ಮಾಡುವುದು ಇನ್ನೊಂದು ಎನ್ನುವುದಕ್ಕೆ ಬಿಜೆಪಿ ಬ್ರ್ಯಾಂಡ್ ಆಗಿದೆ.

ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸುವ ಅಗತ್ಯವಿಲ್ಲ. ಅದು ತಾಯಿಗೆ ಸಮಾನ ಎಂದು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದ್ದಾರೆ. ಯೋಗಿ ಹೀಗೆ ಹೇಳಲು ಕಾರಣವೂ ಇದೆ. 2027ಕ್ಕೆ ಉತ್ತರ ಪ್ರದೇಶ ವಿಧಾನಸಭಾ ಚುನಾವಣೆ ನಡೆಯಲಿದೆ. ಆ ಚುನಾವಣೆಯನ್ನು ಬಿಜೆಪಿ ಗೆಲ್ಲಬೇಕಾಗಿದೆ. ಗೆಲ್ಲುವುದಕ್ಕಾಗಿ ಅದೇ ಹಳೆಯ ಅಸ್ತ್ರವಾದ ಹಿಂದೂ-ಮುಸ್ಲಿಂ ದ್ವೇಷವನ್ನು ಮತ್ತೊಂದು ಮಜಲಿಗೆ ಕೊಂಡೊಯ್ಯಬೇಕಿದೆ. ಹಾಗೆ ಕೊಂಡೊಯ್ಯಲು ಬೇಕಾದ ಹಲವು ಹತಾರುಗಳಲ್ಲಿ ಗೋವು ಕೂಡ ಒಂದಾಗಿದೆ. ಹೀಗಾಗಿ ಗೋವು ಈಗ ತಾಯಿ ಆಗಿ ಅವತಾರ ತಾಳಿದೆ.

ಅಸಲಿಗೆ, 2014ರ ಹಿಂದಕ್ಕೆ, ನಮ್ಮ ದೇಶದಲ್ಲಿ ಗೋವು ಒಂದು ಸಾಧಾರಣ ಸಾಕು ಪ್ರಾಣಿಯಾಗಿತ್ತು. ಹಬ್ಬ-ಹರಿದಿನಗಳಲ್ಲಿ ಮಾತ್ರ ಪೂಜಿಸಲ್ಪಡುತ್ತಿತ್ತು. ರೈತರ ಬದುಕಿನ ಭಾಗವಾಗಿತ್ತು. ಉಳುವುದಕ್ಕೆ, ಹಾಲು-ಮೊಸರಿಗೆ, ಗೊಬ್ಬರಕ್ಕೆ ಬಳಕೆಗೆ ಬರುತ್ತಿತ್ತು. ಅದಕ್ಕೆ ವಯಸ್ಸಾದಾಗ, ಅದನ್ನು ಸಾಕುವುದು ಕಷ್ಟವಾದಾಗ, ಮಾರುವುದು ಮಹಾಪರಾಧವಾಗಿರಲಿಲ್ಲ. ಅದನ್ನು ತಮ್ಮ ಮುಖ್ಯ ಆಹಾರವನ್ನಾಗಿಸಿಕೊಂಡಿದ್ದ ಮುಸ್ಲಿಮರು, ದಲಿತರು, ಕ್ರಿಶ್ಚಿಯನ್ನರು ಅದನ್ನು ಖರೀದಿಸುವುದು ಕೂಡ ಅಪರಾಧವಾಗಿರಲಿಲ್ಲ.

ಆದರೆ, 2017ರಲ್ಲಿ ಅಧಿಕಾರಕ್ಕೆ ಬಂದ ಉತ್ತರ ಪ್ರದೇಶದ ಖಾವಿಧಾರಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಗೋವನ್ನು ಪೂಜಿಸಿ, ಹುಲ್ಲು ತಿನ್ನಿಸಿ, ಮೈದಡವಿದರು. ಅಂದಿನಿಂದ ಗೋವು ಪವಿತ್ರ ಪ್ರಾಣಿಯಾಯಿತು. ಭಾರತೀಯರ ಭಾವನೆ ಜಾಗೃತವಾಯಿತು. ಗೋವಿಗೆ ವಿಶೇಷ ಸ್ಥಾನಮಾನ ಸಿಕ್ಕಿತು. ಅದನ್ನು ಆಹಾರವನ್ನಾಗಿ ಸೇವಿಸುವವರ ಮೇಲೆ ವಿನಾಕಾರಣ ದ್ವೇಷ ಬೆಳೆಯಿತು. ಅಲ್ಲಿಗೆ ಯೋಗಿ ಮತ್ತು ಬಿಜೆಪಿ ಅಂದುಕೊಂಡದ್ದು ಆಗಿತ್ತು. ಚುನಾವಣೆ ಗೆದ್ದು ಅಧಿಕಾರಕ್ಕೇರಿತ್ತು.

ಉತ್ತರ ಪ್ರದೇಶ ಬಿಜೆಪಿ ವಶವಾಯಿತು. ಮುಖ್ಯಮಂತ್ರಿಯಾದ ಯೋಗಿ ಆದಿತ್ಯನಾಥ್, ಮುಸ್ಲಿಮರಿಗೆ ತೊಂದರೆ ಕೊಡುವ ಕಾರಣಕ್ಕಾಗಿಯೇ ಗೋಹತ್ಯೆ ನಿಷೇಧ ಕಾನೂನು ಜಾರಿಗೊಳಿಸಿದರು. ಸರ್ಕಾರವೇ ಮುಂದೆ ನಿಂತು ಗೋ ಶಾಲೆಗಳ ನಿರ್ಮಾಣ, ಗೋ ಸಂರಕ್ಷಣಾ ಯೋಜನೆಗಳನ್ನು ಜಾರಿಗೆ ತಂದಿತು. ಸಾಲದು ಎಂದು, ಸಂಘಪರಿವಾರದ ಗೋ ರಕ್ಷಕರೆಂಬ ಪುಂಡರ ಗುಂಪುಗಳಿಗೆ ಪ್ರೋತ್ಸಾಹ ನೀಡತೊಡಗಿತು. ಕದ್ದುಮುಚ್ಚಿ ಮಾರಾಟ, ಸಾಗಾಟವನ್ನು ತಡೆಯುವ ನಿಟ್ಟಿನಲ್ಲಿ ಮಾರಣಾಂತಿಕ ಹಲ್ಲೆ ಮಾಮೂಲಾಯಿತು. ಬುಲ್ಡೋಜರ್ ನ್ಯಾಯ ಚಾಲ್ತಿಗೆ ಬಂದಿತು. ಹಲ್ಲೆ-ಕೊಲೆ ಕೂಡ ಯೋಗಿ ಆಡಳಿತದಲ್ಲಿ ಸ್ವೀಕೃತವಾಯಿತು. ಇದು ದೇಶದ ಅಲ್ಪಸಂಖ್ಯಾತರಲ್ಲಿ ಅನ್ಯ ಭಾವನೆ ಹುಟ್ಟುಹಾಕಿತು. ಭಯ-ಆತಂಕದಲ್ಲಿ ಬದುಕುವಂತಹ ವಾತಾವರಣ ನಿರ್ಮಿಸಿತು.

ಇನ್ನು ರೈತರಿಗೆ ಮನೆಯಲ್ಲಿ ಸಾಕುತ್ತಿದ್ದ ದನಗಳಿಂದ ಬರುತ್ತಿದ್ದ ಅಲ್ಪಸ್ವಲ್ಪ ಆದಾಯಕ್ಕೆ ಕತ್ತರಿಬಿತ್ತು. ವಯಸ್ಸಾದ ದನಗಳನ್ನು ಸಾಕುವುದು ಹೊರೆಯಾಯಿತು. ಕೊಳ್ಳುವವರು ಇಲ್ಲದಾಗ ಬೀದಿಗೆ ಬಿಟ್ಟರು. ಈಗ ಉತ್ತರ ಪ್ರದೇಶದ ರಸ್ತೆಗಳಲ್ಲಿ ದನಗಳದೇ ಕಾರುಬಾರು. ಸಂಚಾರಕ್ಕೆ ಅಡ್ಡಿಪಡಿಸುವುದು, ವೃದ್ಧರು-ಮಕ್ಕಳಿಗೆ ಗುಮ್ಮುವುದು ಇಲ್ಲಿ ಮಾಮೂಲು. ಆದರೂ ಅವುಗಳನ್ನು ಹೊಡೆಯುವಂತಿಲ್ಲ, ಅವುಗಳಿಂದಾಗುತ್ತಿರುವ ಅವಘಡಗಳು ಒಂದೆರಡಲ್ಲ. ಆದರೂ ಜನ, ಮುಸ್ಲಿಮರು ಗೋವನ್ನು ಕತ್ತರಿಸುತ್ತಾರೆ, ಸೇವಿಸುತ್ತಾರೆ ಎಂಬ ಕಾರಣಕ್ಕೆ ಎಲ್ಲವನ್ನು ಸಹಿಸಿಕೊಂಡರು. ಭಕ್ತರು ಗಂಜಲ ಕುಡಿದು, ಸಗಣಿ ತಿನ್ನತೊಡಗಿದರು.

ಇದು ಬಿಜೆಪಿಗೆ ರಾಜಕೀಯವಾಗಿ ಅನುಕೂಲವಾಗತೊಡಗಿತು. ಇದರಿಂದ ಸ್ಫೂರ್ತಿಗೊಂಡ ಬಿಜೆಪಿ, ತಮ್ಮದೇ ಆಡಳಿತವಿದ್ದ ಗುಜರಾತ್, ಹರಿಯಾಣ, ಕರ್ನಾಟಕ ಹಾಗೂ ರಾಜಸ್ಥಾನ ಸೇರಿದಂತೆ ಕೆಲವು ರಾಜ್ಯಗಳು ಗೋಹತ್ಯೆ ನಿಷೇಧ ಕಾಯ್ದೆಯನ್ನು ಜಾರಿಗೆ ತಂದವು. ಇತ್ತೀಚೆಗಷ್ಟೇ, ಪಶ್ಚಿಮ ಬಂಗಾಳದಲ್ಲಿ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ, ಬಕ್ರೀದ್ ಹಬ್ಬದ ಮುನ್ನ ಪ್ರಾಣಿ ಬಲಿ ಮತ್ತು ಕಸಾಯಿಖಾನೆಗಳನ್ನು ನಿಯಂತ್ರಿಸುವ ಆದೇಶ ಹೊರಡಿಸಿತು.

ಇದಕ್ಕಾಗಿಯೇ ಕಾದು ಕುಳಿತಿದ್ದ ಹಿಂದು ಮಹಾಸಭಾದ ಮಾಜಿ ಉಪಾಧ್ಯಕ್ಷ ಸತೀಶ್ ಕುಮಾರ್ ಅಗರ್ವಾಲ್ ಎಂಬಾತ, ಬಕ್ರೀದ್ ಹಬ್ಬದ ನೆಪದಲ್ಲಿ ಗೋ ಹತ್ಯೆ ನಡೆಯಲಿದೆ, ದೇಶಾದ್ಯಂತ ಗೋಹತ್ಯೆ ನಿಷೇಧ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಬೇಕು ಮತ್ತು ಸಂಪೂರ್ಣ ನಿಷೇಧ ಹೇರಬೇಕು ಎಂದು ಸುಪ್ರೀಂ ಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ.

ಇದೇಕೋ ಅತಿಯಾಗುತ್ತಿದೆ ಎಂದರಿತ ಮುಸ್ಲಿಂ ಸಮುದಾಯ, ನಾವು ಹಬ್ಬದಲ್ಲಿ ದನಗಳ ಹತ್ಯೆ ಮಾಡುವುದಿಲ್ಲ ಮತ್ತು ರೈತರಿಂದ ದನಗಳನ್ನು ಖರೀದಿಸುವುದಿಲ್ಲ ಎಂಬ ದೃಢ ನಿರ್ಧಾರ ತಳೆಯಿತು. ಅಷ್ಟೇ ಅಲ್ಲ, ಹಸುಗಳನ್ನು ಮಾರಲು ಬಂದ ಹಿಂದೂ ರೈತರಿಗೆ, ನಿಮ್ಮ ತಾಯಿ ಸ್ವರೂಪ ದನಗಳನ್ನು ನಾವು ಖರೀದಿಸುವುದಿಲ್ಲ ಎಂದು ವಾಪಸ್ ಕಳಿಸಿದ್ದೂ ಆಯಿತು. ಈ ನೂತನ ಪ್ರತಿಭಟನೆಯು ದೇಶವ್ಯಾಪಿ ವಿಸ್ತರಿಸಿ, ಕರ್ನಾಟಕದ ಹಾಸನದಲ್ಲೂ ಇದು ಪ್ರತಿಧ್ವನಿಸಿತು. ಪರಿಣಾಮವಾಗಿ ರೈತರು ತಮ್ಮ ದನಗಳನ್ನು ಜಿಲ್ಲಾಧಿಕಾರಿ ಕಚೇರಿಗೆ ಅಟ್ಟಿ, ಜಿಲ್ಲಾಡಳಿತವೇ ಖರೀದಿಸುವಂತೆ ಒತ್ತಾಯಿಸಿ, ಪ್ರತಿಭಟನೆ ನಡೆಸಿದ್ದೂ ಆಯಿತು.

ಅಷ್ಟೇ ಅಲ್ಲ, ಇನ್ನೂ ಒಂದು ಹೆಜ್ಜೆ ಮುಂದೆ ಹೋದ, ಮುಸ್ಲಿಂ ಸಮುದಾಯದ ಜಮೀಯತ್ ಉಲೇಮಾ ಎ ಹಿಂದ್ ಅಧ್ಯಕ್ಷ ಮೌಲಾನಾ ಅರ್ಶದ್ ಮಅದನಿ, ಗೋವನ್ನು ರಾಷ್ಟ್ರೀಯ ಪ್ರಾಣಿಯಾಗಿ ಘೋಷಿಸಬೇಕೆಂದು ಕರೆ ನೀಡಿದರು. ಮಾಜಿ ಉಪರಾಷ್ಟ್ರಪತಿ ಹಮೀದ್ ಅನ್ಸಾರಿ ಕೂಡ ದನಿಗೂಡಿಸಿದರು. ಅದಕ್ಕೆ ದೇಶದ ಹಲವು ಮುಸ್ಲಿಂ ಸಂಘಟನೆಗಳು ಬೆಂಬಲಿಸಿದವು.

ಇದೇಕೋ ತಿರುಗುಬಾಣವಾಯಿತಲ್ಲ, 2027ರ ಚುನಾವಣೆಯಲ್ಲಿ ತೊಂದರೆ ಕೊಡಬಹುದಲ್ಲ ಎಂದರಿತ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಮುಸ್ಲಿಮರ ನಿಲುವಿಗೆ ಪ್ರತಿಕ್ರಿಯಿಸುತ್ತ, ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸುವ ಅಗತ್ಯವಿಲ್ಲ. ಅದು ತಾಯಿಗೆ ಸಮಾನ ಎಂದು ತಾಯಿಗೆ ತಳಕು ಹಾಕಲು ಹವಣಿಸಿದರು. ಯೋಗಿಯ ಈ ಹೇಳಿಕೆ ಈಗ ಮತ್ತೊಂದು ವಿವಾದಕ್ಕೆ ಗುರಿಯಾಗಿದೆ.

ಬಿಜೆಪಿ ತನ್ನದೇ ಆಡಳಿತವಿರುವ ಗೋವಾ, ಮೇಘಾಲಯ, ಮಿಜೋರಾಂ ಹಾಗೂ ನಾಗಾಲ್ಯಾಂಡ್‌ನಂತಹ ರಾಜ್ಯಗಳಲ್ಲಿ ಗೋಮಾಂಸ ಸೇವನೆ ಮತ್ತು ಮಾರಾಟಕ್ಕೆ ಯಾವುದೇ ನಿರ್ಬಂಧ ಹೇರಿಲ್ಲ. ಏಕೆಂದರೆ, ಅಲ್ಲಿನ ಬಹುಸಂಖ್ಯಾತರ ಆಹಾರ ಗೋವು. ಅಲ್ಲಿ ಆ ಪದ್ಧತಿಯನ್ನು ಗೌರವಿಸುವ ನೆಪದಲ್ಲಿ ಬಿಜೆಪಿ ಮೌನಕ್ಕೆ ಶರಣಾಗಿದೆ.

ಅಷ್ಟೇ ಅಲ್ಲ, ಭಾರತವು ಜಗತ್ತಿನಲ್ಲೇ ಅತಿ ಹೆಚ್ಚು ಜಾನುವಾರು ಮಾಂಸ ರಫ್ತು ಮಾಡುವ ದೇಶಗಳಲ್ಲಿ ಒಂದಾಗಿದೆ. ದೇಶದ ಪ್ರಮುಖ ಮಾಂಸ ರಫ್ತು ಮಾಡುವ ಕಂಪನಿಗಳ ಮಾಲೀಕರು ಬಿಜೆಪಿಗೆ ಹತ್ತಿರವಿರುವ ಉದ್ಯಮಿಗಳಾಗಿದ್ದಾರೆ. ಅವರು ಪಕ್ಷಕ್ಕೆ ಕೋಟಿಗಟ್ಟಲೆ ನಿಧಿ ನೀಡುವವರಾಗಿದ್ದಾರೆ. ಒಂದು ಕಡೆ ದೇಶದ ಒಳಗಡೆ ಸಣ್ಣ ವ್ಯಾಪಾರಿಗಳು ಮತ್ತು ದಲಿತ-ಅಲ್ಪಸಂಖ್ಯಾತ ಸಮುದಾಯಗಳ ಆಹಾರ ಮತ್ತು ವ್ಯಾಪಾರದ ಹಕ್ಕನ್ನು ಕಸಿದುಕೊಳ್ಳುವ ಬಿಜೆಪಿ, ಇನ್ನೊಂದು ಕಡೆ ದೊಡ್ಡ ಮಟ್ಟದ ರಫ್ತು ಉದ್ಯಮಕ್ಕೆ ಪರೋಕ್ಷವಾಗಿ ಸಹಕರಿಸುತ್ತದೆ.

ಆಡುವುದು ಒಂದು ಮಾಡುವುದು ಇನ್ನೊಂದು ಎನ್ನುವ ದ್ವಂದ್ವಕ್ಕೆ ಬಿಜೆಪಿ ಬ್ರ್ಯಾಂಡ್ ಆಗಿದೆ. ಪ್ರತಿಯೊಂದಕ್ಕೂ ದೇವರು-ಧರ್ಮ-ರಾಷ್ಟ್ರೀಯತೆಯ ಬಣ್ಣ ಹಚ್ಚಿ ದೇಶದ ಜನರನ್ನು ಮೋಸಗೊಳಿಸುತ್ತಲೇ ಸಾಗಿದೆ. ಜನ ಈಗಲಾದರೂ ಎಚ್ಚೆತ್ತುಕೊಳ್ಳಬೇಕಿದೆ. ನಮ್ಮ ಗೋವು ನಮ್ಮ ಹಕ್ಕು ಎಂದು ಎದೆಯುಬ್ಬಿಸಿ ಹೇಳಬೇಕಾಗಿದೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಸಚಿವ ಸಂಪುಟ ಮೊದಲ ಪಟ್ಟಿಯಲ್ಲಿಲ್ಲ ಮಹಿಳೆಯರಿಗೆ ಸ್ಥಾನ: ಲಕ್ಷ್ಮೀ ಹೆಬ್ಬಾಳ್ಕರ್ ಖಾತೆ ಬದಲಾಗುತ್ತಾ?



ಲಕ್ಷ್ಮೀ ಹೆಬ್ಬಾಳ್ಕರ್ ಸಿದ್ದರಾಮಯ್ಯರ ಸಂಪುಟದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆಯಾಗಿದ್ದರು. ತಮ್ಮ ಸ್ಥಾನವನ್ನು ಸಮರ್ಥವಾಗಿ ನಿಭಾಯಿಸಿದವರು. ಹೀಗಿರುವಾಗ ಮೊದಲ ಹಂತದಲ್ಲಿ ಲಕ್ಷ್ಮೀ ಅವರಿಗೆ ಸಚಿವ ಸ್ಥಾನ ಸಿಗದಿರುವುದು ರಾಜಕೀಯ ಚರ್ಚೆಯನ್ನು ಇನ್ನಷ್ಟು ಬಿರುಸಾಗಿಸಿದೆ.

ಜೂನ್ 3ರಂದು ರಾಜ್ಯದ 25ನೇ ಮುಖ್ಯಮಂತ್ರಿಯಾಗಿ ಡಿ ಕೆ ಶಿವಕುಮಾರ್ ಪ್ರಮಾಣವಚನ ಸ್ವೀಕರಿಸಿದ್ದಾರೆ. ಜತೆಗೆ ಉಪಮುಖ್ಯಮಂತ್ರಿಯಾಗಿ ಡಾ. ಜಿ. ಪರಮೇಶ್ವರ್ ಮತ್ತು 12 ಶಾಸಕರು ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಸ್ಪೀಕರ್ ಸ್ಥಾನಕ್ಕೆ ಎಚ್. ಕೆ. ಪಾಟೀಲ್ ಆಯ್ಕೆಯಾಗುವ ಸಾಧ್ಯತೆ ಇದೆ. ಈವರೆಗೆ ಸ್ಪೀಕರ್ ಆಗಿದ್ದ ಯು. ಟಿ. ಖಾದರ್ ಅವರು ಸದ್ಯ ಸಚಿವ ಸಂಪುಟದಲ್ಲಿ ಸ್ಥಾನ ಪಡೆದುಕೊಂಡಿದ್ದಾರೆ. ಬಿ.ಕೆ. ಹರಿಪ್ರಸಾದ್ ಅವರನ್ನು ಕೆಪಿಸಿಸಿ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ. ಆದರೆ ಮೊದಲ ಪಟ್ಟಿಯಲ್ಲಿ ಮಹಿಳೆಯರ ಹೆಸರು ಮಾತ್ರ ಕಾಣಿಸಿಲ್ಲ. ಕಾಂಗ್ರೆಸ್‌ನ ಈ ನಡೆಗೆ ಕಾಂಗ್ರೆಸ್ ಹಿರಿಯ ನಾಯಕಿಯರೇ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಶಾಸಕಿಯರನ್ನು ಸಚಿವೆಯರನ್ನಾಗಿಸಿ ಎಂಬ ಆಗ್ರಹ ಮುಂದಿಟ್ಟಿದ್ದಾರೆ. ಈ ನಡುವೆ ಇದು ಮೊದಲ ಪಟ್ಟಿಯಷ್ಟೇ ಎಂಬ ಸಮರ್ಥನೆಗೂ ಕೆಲವು ಕಾಂಗ್ರೆಸ್ ನಾಯಕರು ಇಳಿದಿದ್ದಾರೆ.

ಈ ಹಿಂದೆ 2023ರಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಅಧಿಕಾರವನ್ನು ಪಡೆದ ಕೂಡಲೇ ಮಹಿಳೆಯರಿಗಾಗಿ ವಿಶೇಷ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಸದ್ದು ಮಾಡಿತ್ತು. ಈ ಪೈಕಿ ಗೃಹಲಕ್ಷ್ಮೀ, ಶಕ್ತಿ ಯೋಜನೆ ಹೆಚ್ಚು ಹೆಸರುವಾಸಿಯಾಗಿದೆ. ಕಾಂಗ್ರೆಸ್ ಗೃಹಲಕ್ಷ್ಮಿಯಂತಹ ಮಹಿಳಾ ಕೇಂದ್ರಿತ ಯೋಜನೆಗಳ ಮೂಲಕ ಅಧಿಕಾರಕ್ಕೆ ಬಂದಿದ್ದರೂ, ಹೊಸ ಸರ್ಕಾರದ ಮೊದಲ ಸಂಪುಟ ರಚನೆಯಲ್ಲೇ ಮಹಿಳೆಯರಿಗೆ ಪ್ರಾತಿನಿಧ್ಯ ನೀಡದಿರುವುದು ಸದ್ಯ ತೀವ್ರ ಟೀಕೆಗೆ ಗುರಿಯಾಗುತ್ತಿದೆ.

ಈ ವಿಚಾರದಲ್ಲಿ ಹಿರಿಯ ಕಾಂಗ್ರೆಸ್ ನಾಯಕಿ ಮಾರ್ಗರೆಟ್ ಆಳ್ವ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ''ಅರ್ಧದಷ್ಟು ಜನಸಂಖ್ಯೆ ಇರುವ ಮತ್ತು ಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವಿಗೆ ಪ್ರಮುಖ ಕಾರಣರಾದ ಮಹಿಳೆಯರನ್ನು ಸಂಪುಟದಿಂದ ದೂರ ಇಟ್ಟಿರುವುದು ಪ್ರಜಾಪ್ರಭುತ್ವದ ಆಶಯಕ್ಕೆ ವಿರುದ್ಧವಾದುದು. ರಾಜ್ಯ ಕಾಂಗ್ರೆಸ್‌ನಲ್ಲಿ ಸಚಿವ ಸ್ಥಾನವನ್ನು ಸಮರ್ಥವಾಗಿ ನಿಭಾಯಿಸಬಲ್ಲ, ಅನುಭವವಿರುವ ಮಹಿಳಾ ನಾಯಕಿಯರಿದ್ದಾರೆ. ಆದರೂ ಕೇವಲ ಪುರುಷರಿಗೆ ಮಾತ್ರ ಆದ್ಯತೆ ನೀಡಿರುವುದು ಸರಿಯಲ್ಲ'' ಎಂಬುದು ಕಾಂಗ್ರೆಸ್ ನಾಯಕಿ ವಾದ. ಜತೆಗೆ ಮಹಿಳಾ ಸಬಲೀಕರಣ ಮತ್ತು ಸಮಾನ ಹಂಚಿಕೆಯ ಬಗ್ಗೆ ಮಾತನಾಡುವ ಕಾಂಗ್ರೆಸ್ ಪಕ್ಷವೇ ಸರ್ಕಾರ ರಚಿಸುವಾಗ ಮಹಿಳೆಯರನ್ನು ಕಡೆಗಣಿಸಬಾರದು ಎಂದು ನಾಯಕತ್ವಕ್ಕೆ ನೆನಪಿಸಿದ್ದಾರೆ.

ಈ ಆಕ್ಷೇಪಗಳ ಬೆನ್ನಲ್ಲೇ ಮುಂಬರುವ ದಿನಗಳಲ್ಲಿ ನಡೆಯಲಿರುವ ಸಂಪುಟ ವಿಸ್ತರಣೆಯ ಸಂದರ್ಭದಲ್ಲಿ ಮಹಿಳೆಯರಿಗೆ ಸ್ಥಾನ ನೀಡಿ ಈ ಕೊರತೆಯನ್ನು ಸರಿದೂಗಿಸಲಾಗುತ್ತದೆ ಎಂಬ ಚರ್ಚೆಗಳು ರಾಜಕೀಯ ವಲಯದಲ್ಲಿ ಜೋರಾಗಿವೆ. ರೂಪಕಲಾ ಶಶಿಧರ್, ನಯನ ಮೋಟಮ್ಮ, ಲಕ್ಷ್ಮೀ ಹೆಬ್ಬಾಳ್ಕರ್ ಈ ಪಟ್ಟಿಯಲ್ಲಿರಬಹುದು ಎಂಬ ನಿರೀಕ್ಷೆಯಿದೆ. ಈ ಪೈಕಿ ಲಕ್ಷ್ಮೀ ಹೆಬ್ಬಾಳ್ಕರ್ ಈ ಹಿಂದಿನ ಸಂಪುಟದಲ್ಲೂ ಸಚಿವರಾಗಿದ್ದವರು. ಗ್ಯಾರಂಟಿ ಯೋಜನೆಗಳನ್ನು ಮುನ್ನಡೆಸಿದವರು. ಆದರೆ ಈ ಬಾರಿ ಅವರಿಗೆ ಯಾಕೆ ಮೊದಲ ಪಟ್ಟಿಯಲ್ಲಿ ಆದ್ಯತೆ ನೀಡಿಲ್ಲ ಎಂಬ ಪ್ರಶ್ನೆ ಹಲವರದ್ದು.

ಲಕ್ಷ್ಮೀ ಹೆಬ್ಬಾಳ್ಕರ್ ಖಾತೆ ಬದಲಾಗುವ ಸೂಚನೆಯೇ?

ಲಕ್ಷ್ಮೀ ಹೆಬ್ಬಾಳ್ಕರ್ ಸಿದ್ದರಾಮಯ್ಯರ ಸಂಪುಟದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆಯಾಗಿದ್ದರು. ಡಿಕೆ ಆಪ್ತ ಬಳಗದಲ್ಲಿ ಗುರುತಿಸಿಕೊಂಡಿದ್ದರು. ಹೀಗಿರುವಾಗ ಮೊದಲ ಹಂತದಲ್ಲಿ ಲಕ್ಷ್ಮೀ ಅವರಿಗೆ ಸಚಿವ ಸ್ಥಾನ ಸಿಗದಿರುವುದು ರಾಜಕೀಯ ಚರ್ಚೆಯನ್ನು ಇನ್ನಷ್ಟು ಬಿರುಸಾಗಿಸಿದೆ. ಆದರೆ ಇದರ ಹಿಂದೆ ಹಲವು ಲೆಕ್ಕಾಚಾರಗಳನ್ನು ಕಾಂಗ್ರೆಸ್ ನಾಯಕರು ಮುಂದಿಡುತ್ತಿದ್ದಾರೆ. ''ಇದು ಕೇವಲ ಮೊದಲ ಪಟ್ಟಿ, ಮುಂಬರುವ ದಿನಗಳಲ್ಲಿ ಸಂಪುಟ ವಿಸ್ತರಣೆಯಾಗಲಿದೆ. ಮುಂದಿನ ಪಟ್ಟಿಯಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಹೆಸರು ಇರಲಿದೆ'' ಎಂಬ ಮಾತುಗಳೂ ಇವೆ.

ಇನ್ನೊಂದೆಡೆ ಖಾತೆ ಬದಲಾವಣೆಯ ಸಾಧ್ಯತೆ ಬಗ್ಗೆಯೂ ಚರ್ಚೆಯಿದೆ. ಹೆಬ್ಬಾಳ್ಕರ್ ಗೃಹಲಕ್ಷ್ಮಿ ಯೋಜನೆಯನ್ನು ಆರಂಭದಲ್ಲಿ ಯಶಸ್ವಿಯಾಗಿ ನಿಭಾಯಿಸಿದ್ದರು. ಆದರೆ, ನಂತರ ಯೋಜನೆಯಲ್ಲಿ ಕೆಲವು ಲೋಪಗಳಾಗಿರುವುದು ನಿಜ. ಈಗ ಹೊಸದಾಗಿ ರಚಿಸಿರುವ ಡಿಕೆಶಿ ಅವರ ಆಪ್ತ ವಲಯದಲ್ಲಿ ಕಾಣಿಸಿಕೊಂಡಿರುವ ಹೆಬ್ಬಾಳ್ಕರ್ ಅವರಿಗೆ ಇನ್ನಷ್ಟು ಪ್ರಭಾವಿ ಅಥವಾ ಬೇರೆ ಖಾತೆಯನ್ನು ನೀಡುವ ಸಾಧ್ಯತೆಗಳಿವೆ ಎಂಬ ಚರ್ಚೆಗಳೂ ನಡೆಯುತ್ತಿವೆ. ಹೆಬ್ಬಾಳ್ಕರ್ ಅವರನ್ನು ರಾಜ್ಯದ ಮೊದಲ ಮಹಿಳಾ ಮುಖ್ಯಮಂತ್ರಿ ಮಾಡಬೇಕು ಎಂಬ ಪೋಸ್ಟರ್‌ಗಳು, ಅಭಿಯಾನಗಳನ್ನೂ ನಾವು ಈ ಸಂದರ್ಭದಲ್ಲಿ ಮರೆಯುವಂತಿಲ್ಲ. ಇವೆಲ್ಲವುದರ ನಡುವೆ ನಾವು ರಾಜ್ಯದ ರಾಜಕೀಯ ಇತಿಹಾಸದಲ್ಲಿ ಮಹಿಳೆಯರಿಗೆ ಸಿಕ್ಕ ಸ್ಥಾನಮಾನದ ಕಡೆ ಕೊಂಚ ದೃಷ್ಟಿ ಹಾಯಿಸಬೇಕಾಗುತ್ತದೆ.

ರಾಜ್ಯದಲ್ಲಿ ಮಹಿಳಾ ರಾಜಕಾರಣಿಗಳು

ರಾಜ್ಯದ ರಾಜಕೀಯ ಇತಿಹಾಸದಲ್ಲಿ ಈವರೆಗೆ ಯಾರೊಬ್ಬ ಮಹಿಳೆಯೂ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡಿಲ್ಲ. 1947ರಲ್ಲಿ ಮೈಸೂರು ರಾಜ್ಯ ರಚನೆಯಾದಾಗಿನಿಂದ ಇಂದಿನವರೆಗೂ ರಾಜ್ಯದಲ್ಲಿ ಕೇವಲ ಗಂಡಸರಷ್ಟೆ ಮುಖ್ಯಮಂತ್ರಿಯಾಗಿರುವುದು. ಮಹಿಳಾ ಸಚಿವರ ಸಂಖ್ಯೆಯೂ ಗಂಡಸರಿಗೆ ಹೋಲಿಸಿದರೆ ಅತಿ ಕಡಿಮೆ. ಆದರೆ ಹಲವು ಪ್ರಭಾವಿ ಮಹಿಳೆಯರು ತಮಗೆ ಸಿಕ್ಕ ಸ್ಥಾನವನ್ನು ಯಶಸ್ವಿಯಾಗಿ ನಿಭಾಯಿಸಿದ್ದಾರೆ.

ಕರ್ನಾಟಕದ ಅಂದರೆ ಆಗಿನ ಮೈಸೂರು ಇತಿಹಾಸದಲ್ಲೇ ಮೊದಲ ಸಚಿವೆ ಯಶೋಧರ ದಾಸಪ್ಪ. 1962ರಲ್ಲಿ ಎಸ್. ಆರ್. ಕಂಠಿ ಹಾಗೂ ಎಸ್. ನಿಜಲಿಂಗಪ್ಪ ಅವರ ಸಂಪುಟದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಚಿವೆಯಾಗಿ ಸೇವೆ ಸಲ್ಲಿಸಿದ್ದರು. ಮದ್ಯಪಾನ ನಿಷೇಧ ಜಾರಿಗೆ ತರಬೇಕೆಂಬ ತಮ್ಮ ತತ್ವಕ್ಕಾಗಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. 1970ರ ದಶಕದಲ್ಲಿ ದೇವರಾಜ್ ಅರಸು ಸಂಪುಟದಲ್ಲಿ ಇವಾಜ್ ಬೇಗಂ ಮೆಕ್ಕಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವರಾಗಿದ್ದರು. ಅದಾದ ಬಳಿಕ 1970 1989ರ ದೇವರಾಜ್ ಅರಸು ಮತ್ತು ವೀರೇಂದ್ರ ಪಾಟೀಲ್ ಸಂಪುಟದಲ್ಲಿ ಮನೋರಮಾ ಮಧ್ವರಾಜ್ ಮಹಿಳಾ ಮತ್ತು ಮಕ್ಕಳ ಕಲ್ಯಾಣ, ರೇಷ್ಮೆ ಹಾಗೂ ಕರಾವಳಿ ಅಭಿವೃದ್ಧಿ ಇಲಾಖೆ ನಿರ್ವಹಿಸಿದ್ದರು.

1980ರ ದಶಕದಲ್ಲಿ ರಾಮಕೃಷ್ಣ ಹೆಗಡೆ ಮತ್ತು ಎಸ್. ಬಂಗಾರಪ್ಪ ಸಂಪುಟ ಅವರ ಸಂಪುಟದಲ್ಲಿ ಚಂದ್ರಪ್ರಭಾ ಅರಸ್, ರೇಷ್ಮೆ, ಸಮಾಜ ಕಲ್ಯಾಣ ಮತ್ತು ಅಬಕಾರಿ ಇಲಾಖೆ ನಿರ್ವಹಿಸಿದ್ದರು. 1994 - 1999ರಲ್ಲಿ ಎಚ್. ಡಿ. ದೇವೇಗೌಡ ಮತ್ತು ಜೆ. ಎಚ್. ಪಟೇಲ್ ಸಂಪುಟದಲ್ಲಿ ಲೀಲಾ ದೇವಿ ಆರ್. ಪ್ರಸಾದ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ನಿಭಾಯಿಸಿದ್ದರು. 1994ರಲ್ಲಿ ಬಿ. ಟಿ. ಲಲಿತಾ ನಾಯಕ್ ಅವರು ಜೆ. ಎಚ್. ಪಟೇಲ್ ಸಂಪುಟದಲ್ಲಿ ಕನ್ನಡ, ಸಂಸ್ಕೃತಿ ಹಾಗೂ ಪ್ರವಾಸೋದ್ಯಮ ಇಲಾಖೆ ನಿರ್ವಹಿಸಿದ್ದರು.

1990ರ ದಶಕದ ಕೊನೆಯಲ್ಲಿ ಜೆ. ಎಚ್. ಪಟೇಲ್ ಸಂಪುಟದಲ್ಲಿ ವಿಮಲಾಬಾಯಿ ದೇಶ್‌ಮುಖ್ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ನಿಭಾಯಿಸಿದ್ದರು. ಅದಾದ ಬಳಿಕ 1999 - 2004ರಲ್ಲಿ ಡಾ. ಮೋಟಮ್ಮ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯನ್ನು ನಿರ್ವಹಿಸಿದ್ದರು. ವಿಧಾನ ಪರಿಷತ್ತಿನ ಮೊದಲ ಮಹಿಳಾ ವಿರೋಧ ಪಕ್ಷದ ನಾಯಕಿಯೂ ಆದವರು ಮೋಟಮ್ಮ. 2008 2013ರ ಅವಧಿಯಲ್ಲಿ ಬಿ. ಎಸ್. ಯಡಿಯೂರಪ್ಪ, ಜಗದೀಶ್ ಶೆಟ್ಟರ್ ಸಂಪುಟದಲ್ಲಿ ಶೋಭಾ ಕರಂದ್ಲಾಜೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ (), ಇಂಧನ ಇಲಾಖೆ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ನಿರ್ವಹಿಸಿದ್ದಾರೆ.

2013 - 2018ರಲ್ಲಿ ನಟಿ, ರಾಜಕಾರಣಿ ಉಮಾಶ್ರೀ ಅವರು ಸಿದ್ದರಾಮಯ್ಯ ಅವರ ಮೊದಲ ಸಂಪುಟದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯನ್ನು ನಿಭಾಯಿಸಿದ್ದಾರೆ. 2018 2019ರಲ್ಲಿ ಎಚ್. ಡಿ. ಕುಮಾರಸ್ವಾಮಿ ಮೈತ್ರಿ ಸಂಪುಟದಲ್ಲಿ ಡಾ. ಜಯಮಾಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಿರ್ವಹಿಸಿದ್ದಾರೆ. 2019 2023ರಲ್ಲಿ ಬಿ. ಎಸ್. ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಸಂಪುಟದಲ್ಲಿ ಶಶಿಕಲಾ ಜೊಲ್ಲೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಮುಜರಾಯಿ, ಹಜ್ ಮತ್ತು ವಕ್ಫ್ ಇಲಾಖೆ ನಿಭಾಯಿಸಿದ್ದಾರೆ. 2023 2026ರ ಅವಧಿಯಲ್ಲಿ ಸಿದ್ದರಾಮಯ್ಯ ಅವರ ಎರಡನೇ ಸಂಪುಟದಲ್ಲಿ ಲಕ್ಷ್ಮೀ ಹೆಬ್ಬಾಳ್ಕರ್ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯನ್ನು ಯಶಸ್ವಿಯಾಗಿ ನಿರ್ವಹಿಸಿದ್ದಾರೆ.

ಹೀಗೆ ರಾಜ್ಯದ ಇತಿಹಾಸದಲ್ಲಿ ಈವರೆಗೆ ನಾವು ನೋಡಿದಾಗ ಕೇವಲ ಒಬ್ಬರೇ ಒಬ್ಬ ಮಹಿಳೆ ಇಂಧನ ಮತ್ತು ಗ್ರಾಮೀಣಾಭಿವೃದ್ಧಿಯಂತಹ ಅತಿ ಪ್ರಮುಖ ಭಾರೀ ಖಾತೆ ಎಂದು ಪರಿಗಣಿಸಲಾಗುವ ಖಾತೆಯನ್ನು ನಿಭಾಯಿಸಿರುವುದು. ಉಳಿದಂತೆ ಬಹುತೇಕ ಮಹಿಳೆಯರಿಗೆ ಸಾಂಪ್ರದಾಯಿಕವಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಥವಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳನ್ನೇ ಹೆಚ್ಚಾಗಿ ನೀಡುತ್ತಾ ಬರಲಾಗಿದೆ. ಪ್ರಸ್ತುತ ಅಸ್ತಿತ್ವಕ್ಕೆ ಬಂದಿರುವ ಡಿ ಕೆ ಶಿವಕುಮಾರ್ ಅವರ ನೂತನ ಸಂಪುಟದಲ್ಲಿ ಆರಂಭಿಕವಾಗಿ ಯಾವುದೇ ಮಹಿಳೆಯರಿಗೆ ಸಚಿವ ಸ್ಥಾನ ನೀಡಿದ್ದಿದ್ದರೂ ಸಂಪುಟ ವಿಸ್ತರಣೆಯಲ್ಲಿ ಮಹಿಳೆಯರಿಗೆ ಸ್ಥಾನ ದೊರೆಯಲಿದೆ ಎಂಬ ನಿರೀಕ್ಷೆ ಹಲವರದ್ದು.

ಭೋಸರಾಜರಿಗೆ ಸಚಿವ ಸ್ಥಾನ ನೀಡಲು

ರಾಯಚೂರು,ಜೂ.04-

ಕಲ್ಯಾಣ ಕರ್ನಾಟಕ ಭಾಗದ ಹಿರಿಯ ನಾಯಕ, ರೈತಪರ ಚಿಂತಕ ಹಾಗೂ ಬಡವರ ಆಶಾಕಿರಣವೆಂದೇ ಗುರುತಿಸಿಕೊಂಡಿರುವ ಎನ್.ಎಸ್. ಭೋಸರಾಜು ಅವರಿಗೆ ನೂತನ ಸಚಿವ ಸಂಪುಟದಲ್ಲಿ ಮತ್ತೊಮ್ಮೆ ಅವಕಾಶ ನೀಡುವಂತೆ ಗ್ರಾಮೀಣ ಯುವ ಕಣ್ಮಣಿ ಹಾಗೂ ಯುವ ಮುಖಂಡ ಕೃಷ್ಣ ಹೂಗನಹಳ್ಳಿ ಆಗ್ರಹಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ಭೋಸರಾಜು ಅವರ ಆಡಳಿತ ಅನುಭವ, ಅಭಿವೃದ್ಧಿ ದೃಷ್ಟಿಕೋನ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಮೇಲಿನ ಕಾಳಜಿ ರಾಜ್ಯಕ್ಕೆ ಅಗತ್ಯವಾಗಿದ್ದು, ಅವರಿಗೆ ಸಚಿವ ಸ್ಥಾನ ನೀಡುವುದರಿಂದ ಸರ್ಕಾರದ ಅಭಿವೃದ್ಧಿ ಕಾರ್ಯಗಳಿಗೆ ಮತ್ತಷ್ಟು ಬಲ ದೊರೆಯಲಿದೆ ಎಂದು ತಿಳಿಸಿದ್ದಾರೆ.

ಸಚಿವರಾಗಿದ್ದ ಅವಧಿಯಲ್ಲಿ ನೀರಾವರಿ ಯೋಜನೆಗಳು, ಚೆಕ್ ಡ್ಯಾಂಗಳು, ರಸ್ತೆ ಅಭಿವೃದ್ಧಿ, ಕುಡಿಯುವ ನೀರಿನ ಸೌಲಭ್ಯ ಸೇರಿದಂತೆ ರೈತರು ಮತ್ತು ಬಡವರ ಬದುಕಿಗೆ ನೆರವಾಗುವ ಅನೇಕ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದಾರೆ. ವಿಶೇಷವಾಗಿ ರಾಯಚೂರು ಜಿಲ್ಲೆಯ ಅಭಿವೃದ್ಧಿಗೆ ಅವರು ನೀಡಿರುವ ಕೊಡುಗೆ ಜನರ ಮನಸ್ಸಿನಲ್ಲಿ ಇನ್ನೂ ಹಸಿರಾಗಿಯೇ ಇದೆ ಎಂದು ಹೇಳಿದ್ದಾರೆ.

ಜೂ.28 ರಿಂದ ಜು. 01ರ ವರೆಗೆ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ

ಬೆಂಗಳೂರು, ಜೂ.4-

ಜಿಲ್ಲೆಯಲ್ಲಿ ಜೂನ್ 28 ರಿಂದ ಜುಲೈ 01 ರವರೆಗೆ ರಾಷ್ಟ್ರೀಯ ಪಲ್ಸ್ ಪೊಲಿಯೋ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಪೋಷಕರು ತಮ 0-5 ವರ್ಷದೊಳಗಿನ ಮಕ್ಕಳನ್ನು ಹತ್ತಿರದ ಪೊಲಿಯೋ ಬೂತ್‌ಗಳಿಗೆ ಕರೆದುಕೊಂಡು ಬಂದು ಉಚಿತ ಪೊಲಿಯೋ ಲಸಿಕೆಯನ್ನು ತಪ್ಪದೆ ಹಾಕಿಸಬೇಕು ಎಂದು ಜಿಲ್ಲಾಧಿಕಾರಿ ಡಾ ಕೆ.ಎನ್.ಅನುರಾಧ ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಟ್ಟದ ಟಾಸ್ಕ್ ಪೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

5 ವರ್ಷದೊಳಗಿನ ಯಾವುದೇ ಮಕ್ಕಳು ಪಲ್ಸ್ ಪೋಲಿಯೋ ಲಸಿಕೆಯಿಂದ ವಂಚಿತರಾಗದಂತೆ ಎಲ್ಲಾ ಮಕ್ಕಳಿಗೂ ತಪ್ಪದೇ ಲಸಿಕೆ ಹಾಕಿಸಲು ಆರೋಗ್ಯ ಇಲಾಖೆ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು. ಆಶಾ, ಅಂಗನವಾಡಿ ಆರೋಗ್ಯಧಿಕಾರಿಗಳು ಪಲ್ಸ್ ಪೋಲಿಯೋ ಲಸಿಕೆ ಬಗ್ಗೆ ಅರಿವು ಮೂಡಿಸಿ ಎಂದರು.

ಗ್ರಾಮೀಣ ಪ್ರದೇಶದಲ್ಲಿ ಪೋಲಿಯೋ ಲಸಿಕೆ ಅಭಿಯಾನದ ಕುರಿತು ಧ್ವನಿವರ್ಧಕ ಮೂಲಕ ವ್ಯಾಪಕ ಜಾಗೃತಿ ಮೂಡಿಸಬೇಕು. ಎನ್.ಸಿ.ಸಿ ಹಾಗೂ ಎನ್.ಎಸ್.ಎಸ್ ವಿದ್ಯಾರ್ಥಿಗಳ ಸಹಕಾರ ಪಡೆದುಕೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯ ಎಲ್ಲಾ ಸರ್ಕಾರಿ ತಾಲ್ಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಮ ಕ್ಲಿನಿಕ್‌ಗಳಲ್ಲಿ ಹಾಗೂ ಆಯ್ದ ಶಾಲಾ, ಅಂಗನವಾಡಿ ಕೇಂದ್ರಗಳು, ಸಾರ್ವಜನಿಕ ಸ್ಥಳಗಳಾದ ಬಸ್ ನಿಲ್ದಾಣ, ರೈಲು ನಿಲ್ದಾಣ, ಮಾರು ಕಟ್ಟೆ, ರಸ್ತೆ ಟೋಲ್ ಗೇಟ್‌ಗಳಲ್ಲಿ ಪೊಲಿಯೋ ಬೂತ್‌ಗಳನ್ನು ತೆರೆಯಲಾಗುತ್ತದೆ ಎಂದರು.

ಜಿಲ್ಲೆಯಲ್ಲಿ ಗರ್ಭಿಣಿ, ಬಾಣಂತಿಯರಿಗೆ ಗರ್ಭಾವಸ್ಥೆಯಿಂದ ಹೆರಿಗೆ ಆಗುವ ವರೆಗೂ ಸಮಯಕ್ಕೆ ಸರಿಯಾಗಿ ಆರೋಗ್ಯ ತಪಾಸಣೆ ಹಾಗೂ ಸೂಕ್ತ ಲಸಿಕೆಗಳು ತಪ್ಪದೇ ನೀಡಬೇಕು. ಹೆರಿಗೆ ನಂತರದಲ್ಲಿ ತಾಯಿ ಮಗುವಿಗೆ ಒಳ್ಳೆಯ ಆರೈಕೆ ಸಿಗುವಂತಾಗಬೇಕು.

ಜಿಲ್ಲೆಯಲ್ಲಿ ಹೆರಿಗೆ ಸಮಯದಲ್ಲಿ ಯಾವುದೇ ಬಾಣಂತಿಯರು ಹಾಗೂ ಶಿಶು ಮರಣ ಸಂಭವಿಸದಂತೆ ಅಗತ್ಯ ವೈದ್ಯಕೀಯ ಸೇವೆ ಸಿಗಬೇಕು. ಹೆರಿಗೆಗೆ ಬರುವ ಗರ್ಭಿಣಿಯರಿಗೆ ಸುಖಾಸುಮ್ಮನೆ ಬೇರೆ ಆಸ್ಪತ್ರೆಗೆ ಕಳುಹಿಸಿದರೆ ಸಂಬಂಧಪಟ್ಟ ವೈದ್ಯರು ಹಾಗೂ ಸಿಬ್ಬಂದಿ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಡಿಸಿ ಎಚ್ಚರಿಕೆ ನೀಡಿದರು. ಶಾಲಾ-ಕಾಲೇಜುಗಳ ಸುತ್ತಮುತ್ತ ತಂಬಾಕು ಉತ್ಪನ್ನಗಳ ಮಾರಾಟ ಮಾಡುವುದನ್ನು ತಡೆಗಟ್ಟಬೇಕು. ಶಾಲೆಗಳು ಮತ್ತು ಶೈಕ್ಷಣಿಕ ಸಂಸ್ಥೆಗಳ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನಗಳ ಮಾರಾಟಕ್ಕೆ ಅವಕಾಶವಿಲ್ಲ. ನಿಯಮಬಾಹಿರವಾಗಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವವರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಾರ್ವಜನಿಕ ಸ್ಥಳದಲ್ಲಿ ಧೂಮಪಾನ ಮಾಡುವುದು ಕಂಡುಬಂದರೆ ಹತ್ತಿರದ ಪೊಲೀಸ್ ಠಾಣೆಗೆ ದೂರು ನೀಡಿ. ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು ಕಡ್ಡಾಯವಾಗಿ ಮೂರು ತಿಂಗಳಗೊಮೆ ಆಯಾ ತಾಲ್ಲೂಕಿನ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ತಂಬಾಕು ನಿಯಂತ್ರಣ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಲು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆರೋಗ್ಯ ಅಧಿಕಾರಿ ಲಕ್ಕಾ ಕೃಷ್ಣಾರೆಡ್ಡಿ, ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳಾದ ಡಾ.ಸೀಮಾ ರುದ್ರಪ್ಪ ಮಾಬಳೆ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ. ಹೇಮಾವತಿ, ತಾಲ್ಲೂಕು ಆರೋಗ್ಯಾಧಿಕಾರಿಗಳು, ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR